ಕನ್ನಡ ದಿನಪತ್ರಿಕೆ
06 ಎಪ್ರಿಲ್ । ಶನಿವಾರ
06 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 42 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ರಾಮೇಶ್ವರಂ 'ಕೆಫೆ ಬಾಂಬ್' ಬ್ಲಾಸ್ಟ್ ಪ್ರಕರಣ: ಬಿಜೆಪಿ ಕಾರ್ಯಕರ್ತನನ್ನು ವಶಕ್ಕೆ ಪಡೆದ ಎನ್‌ಐಎ ಅಧಿಕಾರಿಗಳು



ಬೆಂಗಳೂರು: ಬೆಂಗಳೂರಿನಲ್ಲಿ ರಾಮೇಶ್ವರಂ ಕೆಫೆಯಲ್ಲಿ ಬಾಂಬೆ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಡಬ್ಬಿಂಗ್ ಇಷ್ಟ ಸಿಕ್ಕಿದ್ದು ಬಿಜೆಪಿ ಕಾರ್ಯಕರ್ತನನ್ನು ಇದೀಗ ವಶಪಡಿಸಿಕೊಂಡಿದೆ ಎಂದು ತಿಳಿದುಬಂದಿದೆ.

ಕಳೆದ ವಾರ ತೀರ್ಥಹಳ್ಳಿಯಲ್ಲಿ ಇಬ್ಬರು ಮುಸ್ಲಿಂ ಯುವಕರ ಮನೆ ಹಾಗೂ ಮೊಬೈಲ್ ಅಂಗಡಿ ಮೇಲೆ ದಾಳಿ ನಡೆಸಿ ಶೋಧ ನಡೆಸಿದ್ದರು.

ತನಿಖೆ ವೇಳೆ ಇಬ್ಬರು ಮುಸ್ಲಿಂ ಯುವಕರ ಜೊತೆ ಬಿಜೆಪಿ ಕಾರ್ಯಕರ್ತ ಸಾಯಿ ಪ್ರಸಾದ್ ಸಂಪರ್ಕದಲ್ಲಿದ್ದ ಹಿನ್ನೆಲೆಯಲ್ಲಿ ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಇದೀಗ ಬಿಜೆಪಿ ಕಾರ್ಯ ಕರ್ತನಾಗಿರುವ ಸಾಯಿಪ್ರಸಾದನ್ನು ಎನ್‌ಐಎ ಅಧಿಕಾರಿಗಳು ವಶಕ್ಕೆ ಪಡೆದುಕೊಂಡು ವಿಚಾರಣೆಗೆ ಎಂದು ಕರೆದುಕೊಂಡು ಹೋಗಿದ್ದಾರೆ ಎಂದು ತಿಳಿದು ಬಂದಿದೆ. ಕಳೆದ ಬಾರಿ ಅಷ್ಟೇ ಪ್ರಮುಖ ಆರೋಪಿ ಹಾಗು ಬಾಂಬು ತಯಾರಿಕ ಮುಜಾಮಿಲ್ಲನ್ನು ಎನ್‌ಐಎ ಅಧಿಕಾರಿಗಳು ಬಂಧಿಸಿದ್ದರು.



## ಲಾಡ್ಜ್ ಒಂದರಲ್ಲಿ ರಾಶಿ ರಾಶಿ ಸೀರೆ ಪತ್ತೆ

ವಿಜಯನಗರ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ದೇಶಾದ್ಯಂತ ಮಾದರಿ ನೀತಿ ಸಂಹಿತೆ ಜಾರಿಯಾಗಿದ್ದು, ಚುನಾವಣಾ ಅಕ್ರಮಗಳ ಮೇಲೆ ಅಧಿಕಾರಿಗಳು ಹದ್ದಿನ ಕಣ್ಣಿಟ್ಟಿದ್ದಾರೆ. ಆದಾಗ್ಯೂ ಅಧಿಕಾರಿಗಳು, ಪೊಲೀಸರ ಕಣ್ತಪ್ಪಿಸಿ ಮತದಾರರಿಗೆ ಆಮಿಷವೊಡ್ಡಲು ರಾಜಕೀಯ ಮುಖಂಡರು ನಡೆಸುತ್ತಿರುವ ಖತರ್ನಾಕ್ ಐಡಿಯಾಗಳು, ಗಿಫ್ಟ್ ಗಳು, ಕಂತೆ ಕಂತೆ ಹಣ ಜಪ್ತಿಯಾಗುತ್ತಲೇ ಇದೆ.

ವಿಜಯನಗರ ಜಿಲ್ಲೆಯ ಹೊಸಪೇಟೆಯ ಲಾಡ್ಜ್ ಒಂದರಲ್ಲಿ ರಾಶಿ ರಾಶಿ ಸೀರೆಗಳು ಪತ್ತೆಯಾಗಿವೆ.

ದಾಖಲೆ ಇಲ್ಲದೇ ಅನಧಿಕೃತವಾಗಿ ಸೀರೆಗಳನ್ನು ಲಾಡ್ಜ್ ನಲ್ಲಿ ಸಗ್ರಹಿಸಿಡಲಾಗಿದ್ದು, ಪೊಲೀಸರು ಜಪ್ತಿ ಮಾಡಿದ್ದಾರೆ.

ಚುನಾವಣೆ ಸಂದರ್ಭದಲ್ಲಿ ಮತದಾರರಿಗೆ ಆಮಿಷವೊಡ್ಡಿ, ಸೀರೆಗಳನ್ನು ಹಂಚಲು ಇಲ್ಲಿ ಸಂಗ್ರಹಿಸಿಟ್ಟಿರುವ ಬಗ್ಗೆ ಅನುಮಾನ ವ್ಯಕ್ತವಾಗಿದೆ.

ಹೊಸಪೇಟೆ ಡಿವೈ ಎಸ್ ಪಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸದ್ಯ ಈ ಸೀರೆ ರಾಶಿಗಳು ಯಾವ ಪಕ್ಷಕ್ಕೆ ಸೇರಿದ್ದು ಎಂಬ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ.

ಲಾಡ್ಜ್ ನ ಎರಡು ಕೊಠಡಿಗಳಲ್ಲಿ ಸೀರೆ ಸಂಗ್ರಹಿಸಿಡಲಾಗಿತ್ತು. ಸದ್ಯ ಸೀರೆ ರಾಶಿಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

## 1 ಲಕ್ಷ ಲಂಚ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ಪಿಎಸ್‌ಐ



ಶಿವಮೊಗ್ಗ: ಓಸಿ ಆಡಿಸಲು ಅನುಮತಿಗೆ ಮಾಮೂಲಿ ರೂಪದಲ್ಲಿ 1 ಲಕ್ಷ ಲಂಚ ಪಡೆಯುತ್ತಿದ್ದ ಶಿವಮೊಗ್ಗದ ಸಿಇಎನ್ ಠಾಣೆಯ ಸಹಾಯಕ ಸಬ್ ಇನ್‌ಸ್ಪೆಕ್ಟರ್ ಮೊಹಮ್ಮದ್ ರೆಹಮಾನ್ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಶಿವಮೊಗ್ಗದ ಆರ್‌ಎಂಎಲ್ ನಗರದ ನಿವಾಸಿ ರಫೀಕ್ ಎಂಬುವವರಿಗೆ ಮಾಮೂಲಿ ರೂಪದಲ್ಲಿ ಮಾಸಿಕ ರೂ 1.20 ಲಕ್ಷ ಹಣ ಕೊಡುವಂತೆ ಮೊಹಮ್ಮದ್ ರೆಹಮಾನ್ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ.

ಅದರಲ್ಲಿ 1 ಲಕ್ಷ ಪಡೆಯುವಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ ಎಂದು ತಿಳಿದುಬಂದಿದೆ.

ಹಮಾಲಿಗಳ ವೇಷದಲ್ಲಿ ಬಂದಿದ್ದರು: ರೆಹಮಾನ್ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುವುದನ್ನು ಖಾತರಿಪಡಿಸಿಕೊಂಡಿದ್ದ ಲೋಕಾಯುಕ್ತ ಪೊಲೀಸರು ರೆಡ್ ಹ್ಯಾಂಡ್ ಆಗಿ ಹಿಡಿಯಲು ಸಿದ್ಧತೆ ನಡೆಸಿದ್ದರು. ಶಿವಮೊಗ್ಗದ ಲೋಕಾಯುಕ್ತ ಹಾಗೂ ಸ್ಥಳೀಯ ಪೊಲೀಸರು ಮೊಹಮ್ಮದ್ ರೆಹಮಾನ್ ಅವರಿಗೆ ಪರಿಚಯವಿದ್ದ ಕಾರಣ ಚಿತ್ರದುರ್ಗದಿಂದ ಬಂದಿದ್ದ ಎಸ್ಪಿ ವಾಸುದೇವರಾಮ್ ನೇತೃತ್ವದ ಲೋಕಾಯುಕ್ತ ಪೊಲೀಸರು ಪಂಚೆ-ಬನಿಯನ್ ತೊಟ್ಟು ಹಮಾಲಿಗಳ ವೇಷದಲ್ಲಿ ಕಾರ್ಯಾಚರಣೆಗೆ ಇಳಿದಿದ್ದರು.

ಇಲ್ಲಿನ ಜಯನಗರ ಪೊಲೀಸ್ ಠಾಣೆ ಕಟ್ಟಡದಲ್ಲಿರುವ ಸಿಇಎನ್ ಠಾಣೆಯ ಬಳಿ ಕಾದು ನಿಂತಿದ್ದ ಲೋಕಾಯುಕ್ತ ಪೊಲೀಸರು, ನಿಗದಿಯಂತೆ ಠಾಣೆಯ ಬಳಿ ರೆಹಮಾನ್ ದೂರುದಾರ ರಫೀಕ್ ಅವರಿಂದ ಲಂಚದ ಮೊತ್ತ ಪಡೆಯುವಾಗ ದಾಳಿ ನಡೆಸಿ ಹಣದ ಸಮೇತ ಬಂಧಿಸಿದ್ದಾರೆ ಎಂದು ತಿಳಿದುಬಂದಿದೆ.

# 2024ರ ಲೋಕಸಭಾ ಚುನಾವಣೆಗೆ ಪ್ರಣಾಳಿಕೆ ಬಿಡುಗಡೆ ಮಾಡಿದ ಕಾಂಗ್ರೆಸ್




ನವದೆಹಲಿ: ಮುಂಬರಲಿರುವ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಪಕ್ಷವು ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ. ಲೋಕಸಭೆ ಚುನಾವಣೆಯ ರಣಕಹಳೆ ಮೊಳಗುತ್ತಿದ್ದಂತೆಯೇ ಎಲ್ಲ ಪಕ್ಷಗಳು ಜನತೆಗೆ ಭರವಸೆಗಳ ಸರಮಾಲೆಯನ್ನೇ ನೀಡಲಾರಂಭಿಸಿವೆ. ಕಾಂಗ್ರೆಸ್ ಕೂಡ ಚುನಾವಣಾ ರ್ಯಾಲಿಗಳಲ್ಲಿ ಜನರಿಗೆ ಹಲವು ಭರವಸೆಗಳನ್ನು ನೀಡಿದೆ. ಈ ನಡುವೆ ಇಂದು ಕಾಂಗ್ರೆಸ್ ತನ್ನ ಪ್ರಣಾಳಿಕೆ ಬಿಡುಗಡೆ ಮಾಡಿದೆ.

ಅಷ್ಟಕ್ಕೂ ಕಾಂಗ್ರೆಸ್ ಕೊಟ್ಟಿರುವ ಗ್ಯಾರಂಟಿಗಳೇನು ಎಂಬುದನ್ನು ತಿಳಿಯೋಣ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಇಂದು ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದರು. ಪ್ರಣಾಳಿಕೆಯಲ್ಲಿ ಪಕ್ಷವು ಪಂಚ ನ್ಯಾಯ ಮತ್ತು 25 ಭರವಸೆಗಳನ್ನು ಭರವಸೆ ನೀಡಿದೆ.

ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ 'ಯುವ ನ್ಯಾಯ', 'ನಾರಿ ನ್ಯಾಯ', 'ಕಿಸಾನ್ ನ್ಯಾಯ', 'ಶ್ರಮಿಕ್ ನ್ಯಾಯ' ಮತ್ತು 'ಹಿಸ್ಸೆದಾರಿ ನ್ಯಾಯ' ಹಾಗೂ ಖಾತರಿಗಳು ಸೇರಿದಂತೆ ಪಂಚ ನ್ಯಾಯ ಅಥವಾ ನ್ಯಾಯದ ಐದು ಸ್ತಂಭಗಳಿಗೆ ಒತ್ತು ನೀಡಿದೆ.

ಕಾಂಗ್ರೆಸ್ ಪಕ್ಷವು ದೇಶಾದ್ಯಂತ ಜಾತಿ ಆಧಾರಿತ ಜನಗಣತಿ ನಡೆಸುವುದಾಗಿ ಭರವಸೆ ನೀಡಿದೆ. 2024ರಲ್ಲಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ರಚನೆಯಾದರೆ ಬಡ ಕುಟುಂಬದ ಮಹಿಳೆಯರಿಗೆ ಪ್ರತಿ ವರ್ಷ ಲಕ್ಷ ರೂ.ಗಳ ನೆರವು ನೀಡುವುದಾಗಿ ತಿಳಿಸಿದ ಅವರು ರೈತರ ಸಾಲ ಮನ್ನಾ ಮಾಡುವುದಾಗಿ ಭರವಸೆ ನೀಡಿದರು.

ಯುವ ನ್ಯಾಯ ಅಡಿಯಲ್ಲಿ ಪಕ್ಷವು ಮಾತನಾಡಿರುವ ಐದು ಖಾತರಿಗಳಲ್ಲಿ 30 ಲಕ್ಷ ಸರ್ಕಾರಿ ಉದ್ಯೋಗಗಳನ್ನು ಒದಗಿಸುವ ಭರವಸೆ ಮತ್ತು ಒಂದು ವರ್ಷದವರೆಗೆ ಅಪ್ರೆಂಟಿಸ್‌ಶಿಪ್ ಕಾರ್ಯಕ್ರಮದಡಿಯಲ್ಲಿ ಯುವಕರಿಗೆ 1 ಲಕ್ಷ ರೂ. ನೀಡುವುದಾಗಿ ತಿಳಿಸಿದ್ದಾರೆ.

ಕಾರ್ಮಿಕ ನ್ಯಾಯ ಅಡಿಯಲ್ಲಿ, ಕಾರ್ಮಿಕರಿಗೆ ಆರೋಗ್ಯದ ಹಕ್ಕನ್ನು ಒದಗಿಸುವುದು, ದಿನಕ್ಕೆ ಕನಿಷ್ಠ 400 ರೂ. ವೇತನ ಮತ್ತು ನಗರ ಉದ್ಯೋಗ ಖಾತರಿಯನ್ನು ಖಚಿತಪಡಿಸುವುದಾಗಿ ಭರವಸೆ ನೀಡಿದ್ದಾರೆ.

ಲೋಕಸಭೆ ಚುನಾವಣೆಗೆ ಇನ್ನೇನು ಕೆಲವೇ ದಿನಗಳು ಬಾಕಿ ಉಳಿದಿವೆ. ಏಪ್ರಿಲ್ 19 ರಂದು ಮೊದಲ ಹಂತದ ಮತದಾನ ನಡೆಯಲಿದೆ. ಪ್ರಣಾಳಿಕೆಯಲ್ಲಿ 25 ಬಗೆಯ ಭರವಸೆಗಳನ್ನು ನೀಡಲಾಗಿದೆ. ನಮ್ಮ ಪ್ರಣಾಳಿಕೆ ಬಡವರಿಗೆ ಮೀಸಲಾಗಿದೆ ಎಂದು ಖರ್ಗೆ ಹೇಳಿದರು.

## ಅರಭಾವಿ ಕ್ಷೇತ್ರದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಿಂಚಿನ ಸಂಚಾರ



ಬೆಳಗಾವಿ: ಅರಭಾವಿ ವಿಧಾನಸಭಾ ಕ್ಷೇತ್ರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಲೋಕಸಭಾ ಚುನಾವಣಾ ಪ್ರಚಾರಾರ್ಥ ಶುಕ್ರವಾರ ಮಿಂಚಿನ ಸಂಚಾರ ನಡೆಸಿದರು. ಅರಭಾವಿ ಕ್ಷೇತ್ರದ ಮೆಳವಂಕಿ, ಕೌಜಲಗಿ, ಯಾದವಾಡ, ಹಳ್ಳೂರಿನ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕಾರ್ಯಕರ್ತರ ಸಮಾವೇಶ ನಡೆಸಿದರು. ಶನಿವಾರವೂ ಕ್ಷೇತ್ರದಲ್ಲಿ ಪ್ರಚಾರ ಮುಂದುವರಿಸಲಿದ್ದಾರೆ.

ಬಿರು ಬಿಸಿಲನ್ನು ಲೆಕ್ಕಿಸದೆ ಸಾವಿರಾರು ಸಂಖ್ಯೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಸಮಾವೇಶಗಳ ಯಶಸ್ಸಿಗೆ ಕೈ ಜೋಡಿಸಿದರು. ಮಧ್ಯಾಹ್ನ 1 ಗಂಟೆಗೆ ಮೆಳವಂಕಿಯಲ್ಲಿ ಆರಂಭಗೊಂಡ ಚುನಾವಣಾ ಪ್ರಚಾರ, ರಾತ್ರಿ 8.30ಕ್ಕೆ ಮೂಡಲಗಿ ತಾಲೂಕಿನ ಹಳ್ಳೂರಿನಲ್ಲಿ ಮುಕ್ತಾಯಗೊಂಡಿತು.

**ಮೃಣಾಲ್ ಬೆಂಬಲಿಸಿ, ಸ್ವಾಭಿಮಾನ ಉಳಿಸಿ:**

ಯಾದವಾಡದಲ್ಲಿ ಮಾತನಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಕ್ಷೇತ್ರದ ಮನೆ ಮಗ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಗೆಲ್ಲಿಸುವ ಮೂಲಕ ಬೆಳಗಾವಿ ಜಿಲ್ಲೆಯ ಜನ ಸ್ವಾಭಿಮಾನಿಗಳು ಎಂದು ನಿರೂಪಿಸಬೇಕು ಎಂದು ಕರೆ ನೀಡಿದರು. ಕ್ಷೇತ್ರದ ಸಮಸ್ಯೆಗಳನ್ನು ಆಲಿಸಲು ಮೃಣಾಲ್ ನಿಮ್ಮ ಮನೆ ಬಾಗಿಲಿಗೆ ಬರುತ್ತಾನೆ. ಬಿಜೆಪಿ ಅಭ್ಯರ್ಥಿ ಗೆದ್ದರೆ, ಅವರನ್ನು ಹುಬ್ಬಳ್ಳಿಗೆ ಹುಡುಕಿಕೊಂಡು ಹೋಗುವ ಪರಿಸ್ಥಿತಿ ಬರುತ್ತದೆ ಎಂದು ಹೇಳಿದರು.

## ಮಂಡ್ಯದಿಂದ ಎಚ್‌ಡಿಕೆ ವಿರುದ್ಧ ಎಚ್‌ಡಿ ರೇವಣ್ಣ ಸ್ಪರ್ಧೆ



ಮಂಡ್ಯ: ಮಂಡ್ಯ ಲೋಕಸಭಾ ಕ್ಷೇತ್ರ ಈ ಬಾರಿಯೂ ತೀವ್ರ ಕುತೂಹಲ ಮೂಡಿಸಿದೆ. ಬೇಸಿಗೆಯ ಬಿಸಿಲಿನ ಕಾವಿಗಿಂತ ಚುನಾವಣಾ ಕಾವು ಏರುತ್ತಿದ್ದು, ಆಡಳಿತರೂಢ ಕಾಂಗ್ರೆಸ್ ನಿಂದ ಸ್ಟಾರ್ ಚಂದ್ರ ಅಭ್ಯರ್ಥಿಯಾಗಿದ್ರೆ, ಇತ್ತ ಕಾಂಗ್ರೆಸ್ ಠಕ್ಕರ್ ಕೊಡುವ ನಿಟ್ಟಿನಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಅವರನ್ನ ಕಣಕ್ಕಿಳಿಸಿದ್ದಾರೆ.

ಹೌದು, ಜೆಡಿಎಸ್ ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಮಾಜಿ ಸಿಎಂ ಎಚ್‌ಡಿ ಕುಮಾರಸ್ವಾಮಿ ಖುದ್ದು ಕಣಕ್ಕಿಳಿದಿದ್ದು, ಮಂಡ್ಯದಲ್ಲಿ ಈ ಬಾರಿ ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಅವರಿಗೆ ದೊಡ್ಡ ಸವಾಲು ಎದುರಾಗಿದೆ. ಮಂಡ್ಯ ಮೈತ್ರಿ ಅಭ್ಯರ್ಥಿಯಾಗಿ ಹೆಚ್ ಡಿ ಕುಮಾರಸ್ವಾಮಿ ಕಣದಲ್ಲಿದ್ದು, ಕುಮಾರಸ್ವಾಮಿ ಅವರ ವಿರುದ್ಧವಾಗಿ ಹೆಚ್ ಡಿ ರೇವಣ್ಣ ಕಣಕ್ಕಿಳಿದಿದ್ದು, ಸಾಕಷ್ಟು ಕುತೂಹಲ ಮೂಡಿಸಿದೆ.

ಇತ್ತ ಕುಮಾರಸ್ವಾಮಿ ಅವರನ್ನ ಸೋಲಿಸುವ ನಿಟ್ಟಿನಲ್ಲಿ ಆಡಳಿತರೂಢ ಕಾಂಗ್ರೆಸ್ ಮಾಸ್ಟರ್ ಪ್ಲಾನ್ ನಡೆಸಿದ್ರೆ, ಇತ್ತ ಎಚ್‌ಡಿ ಕುಮಾರಸ್ವಾಮಿಯವರಿಗೆ ಸೋಲಿನ ರುಚಿ ಉಣ್ಣಿಸಲು ಎಚ್‌ಡಿ ರೇವಣ್ಣ ಅವರೇ ಮಂಡ್ಯದಲ್ಲಿ ಲೋಕಸಭಾ ಚುನಾವಣಾ ಕಣಕ್ಕೆ ಇಳಿದಿದ್ದಾರೆ. ಕುಮಾರಸ್ವಾಮಿ ಅವರ ವಿರುದ್ಧ ಹೆಚ್ ಡಿ ರೇವಣ್ಣ ಅವರು ಕಣಕ್ಕಿಳಿದಿರುವುದು ಹಲವು ಗೊಂದಲಗಳಿಗೆ ಕಾರಣವಾಗುತ್ತಾ ಎನ್ನುವ ಚರ್ಚೆ ಶುರುವಾಗಿದೆ. ಕೊನೆಗೂ ಮೈತ್ರಿಯಿಂದ ಮಂಡ್ಯ ಕ್ಷೇತ್ರವನ್ನ ಪಡೆಯುವಲ್ಲಿ ಯಶಸ್ವಿಯಾದ ದಳಪತಿಗಳಿಗೆ ಮತ್ತೊಂದು ಸವಾಲ್ ಎದುರಾಗಿದೆ. ಮಂಡ್ಯ ಲೋಕಸಭಾ ಕ್ಷೇತ್ರದಿಂದ ಎಚ್‌ಡಿ ಕುಮಾರಸ್ವಾಮಿ ವಿರುದ್ಧ ಎಚ್‌ಡಿ ರೇವಣ್ಣ ಅವರೇ ಖುದ್ದು ಮಂಡ್ಯ ಕಣಕ್ಕಿಳಿದಿದ್ದಾರೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದ ಸುಮಲತಾ ಅಂಬರೀಶ್ ವಿರುದ್ಧ ನಿಖಿಲ್ ಕುಮಾರಸ್ವಾಮಿ ಸ್ಪರ್ಧೆ ನಡೆಸಿದ್ರೆ, ಈ ಚುನಾವಣೆಯಲ್ಲಿ ಅಣ್ಣ ತಮ್ಮಂದಿರ ಮಧ್ಯೆ ಕದನ ಶುರುವಾಯ್ತಾ ಎಂದು ನೀವು ಪ್ರಶ್ನಿಸಬಹುದು.

ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ವಿರುದ್ಧ ಎಚ್‌ಡಿ ರೇವಣ್ಣ ಅವರೇ ಸ್ಪರ್ಧೆ ಮಂಡ್ಯದಲ್ಲಿ ಸ್ಪರ್ಧೆ ಮಾಡಿದ್ದಾರೆ. ಆದರೆ ನೀವು ತಿಳಿದುಕೊಂಡಂತೆ ಇವರು ಕುಮಾರಸ್ವಾಮಿ ಅವರ ಸಹೋದರ ಹೆಚ್ ಡಿ ರೇವಣ್ಣ ಅಲ್ಲ, ಇವರು ಬೇರೆ ಎಚ್ ಡಿ ರೇವಣ್ಣ, ಮಂಡ್ಯ ಲೋಕಸಭಾ ಕ್ಷೇತ್ರದಿಂದ ಅಭ್ಯರ್ಥಿಯಾಗಿ ಎಚ್‌ಡಿ ರೇವಣ್ಣ ಎಂಬುವರು ಸ್ಪರ್ಧಿಸುತ್ತಿದ್ದಾರೆ.

## ಸುಮಲತಾ ಅಂಬರೀಶ್ ಬಿಜೆಪಿ ಸೇರ್ಪಡೆ



ಬೆಂಗಳೂರು: ಕಳೆದ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ಬೆಂಬಲ ವ್ಯಕ್ತಪಡಿಸಿದ್ದ ಸುಮಲತಾ ಅಂಬರೀಶ್ ಅವರು ಇಂದು ಅಧಿಕೃತವಾಗಿ ಬಿಜೆಪಿಗೆ ಸೇರ್ಪಡೆಯಾಗಿದ್ದಾರೆ.

ಜೊತೆಗೆ ಕ್ರಿಕೆಟಿಗ ದೊಡ್ಡ ಗಣೇಶ ಮತ್ತು ಕೊಪ್ಪಳ ಮಾಜಿ ಸಂಸದ ಶಿವರಾಮಗೌಡ ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ಪಕ್ಷದ ಕಚೇರಿಯಲ್ಲಿ ಬಿಜೆಪಿ ಹಿರಿಯ ನಾಯಕ, ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ, ಪಕ್ಷದ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸಮ್ಮುಖದಲ್ಲಿ ಬಿಜೆಪಿ ಸೇರಿದರು.

ಬಿಜೆಪಿ ಸೇರ್ಪಡೆಗೂ ಮುನ್ನ ಸುಮಲತಾ ಅಂಬರೀಶ್ ಅವರು, "ಮಂಡ್ಯ ಜಿಲ್ಲೆಯ ಸಮಗ್ರ ಅಭಿವೃದ್ಧಿಯೇ ನನ್ನ ಮೂಲ ಮಂತ್ರವಾಗಿದೆ. ಮೋದಿ ಮತ್ತೊಮ್ಮೆ ಪ್ರಧಾನಿಯಾಗಲಿ ಎಂಬ ಆಶಯದಿಂದ ಬಿಜೆಪಿಗೆ ಸೇರ್ಪಡೆಯಾಗುತ್ತಿದ್ದೇನೆ. ಮಂಡ್ಯದ ನನ್ನ ಅಭಿಮಾನಿಗಳು, ನಟ ದಿ.ಅಂಬರೀಶ್ ಅಭಿಮಾನಿಗಳು ಹಿತೈಷಿಗಳ ಹಾರೈಕೆ ಮತ್ತು ಆಶೀರ್ವಾದವಿರಲಿ" ಎಂದು ಮಂಡ್ಯ ಸೊಸೆ ಸುಮಲತಾ ಅಂಬರೀಶ್ ಅವರು ಸಾಮಾಜಿಕ ಜಾಲತಾಣದ ಮೂಲಕ ಮನವಿ ಮಾಡಿದ್ದಾರೆ.

ಪಕ್ಷ ಸೇರ್ಪಡೆ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸುಮಲತಾ ಅಂಬರೀಶ್, ಪ್ರಧಾನಿ ನರೇಂದ್ರ ಮೋದಿ ಅವರ ಕಾರ್ಯವೈಖರಿ ನನಗೆ ಪ್ರೇರಣಾದಾಯಕವಾಗಿದೆ. ಪ್ರಧಾನಿ ಮೋದಿಯವರು ನುಡಿದಂತೆ ನಡೆಯುತ್ತಿದ್ದಾರೆ. ಅವರ ವಿಕಸಿತ ಭಾರತ ಕನಸು ನನಸಾಗಬೇಕು. ಅದಕ್ಕೆ ನಾನು ಬೆಂಬಲಿಸುವೆ. ಮುಖ್ಯವಾಗಿ ನನ್ನ ಮಂಡ್ಯ ಜಿಲ್ಲೆ ಅಭಿವೃದ್ಧಿಯಾಗಬೇಕು. ಮತ್ತು ಸಂಸತ್ತಿನಲ್ಲಿ ಹಿರಿಯ ಬಿಜೆಪಿ ನಾಯಕರು ನನಗೆ ಮಾರ್ಗದರ್ಶನ ಮಾಡಿದರು. ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರು, ತಮ್ಮ ಅವಧಿಯಲ್ಲಿ ಮಂಡ್ಯ ಜಿಲ್ಲೆಗೆ ಸಾಕಷ್ಟು ಕೊಡುಗೆ ಕೊಟ್ಟಿದ್ದಾರೆ. ಈ ಎಲ್ಲ ಕಾರಣದಿಂದ ನಾನು ಬಿಜೆಪಿ ಸೇರಿದ್ದೇನೆ ಎಂದರು.

## ಶ್ರೀ ವೀರಭದ್ರೇಶ್ವರ ದೇವರಿಗೆ ವಿಶೇಷ ಪೂಜೆ





ಬೆಳಗಾವಿ: ಲೋಕಸಭಾ ಚುನಾವಣೆ ಅಂಗವಾಗಿ ರಾಮದುರ್ಗ ಮಾಜಿ ಶಾಸಕರಾದ ಶ್ರೀ ಮಹದೇವಪ್ಪ ಯಾದವಾಡ ಅವರ ಮನೆಗೆ ಭೇಟಿ ನೀಡಿ, ಉಭಯ ಕುಶಲೋಪರಿ ವಿಚಾರಿಸಿ, ಮಾನ್ಯ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜೀ ಅವರನ್ನು ಮತ್ತೊಮ್ಮೆ ಪ್ರಧಾನಮಂತ್ರಿಗಳಾಗಿ ಆಯ್ಕೆ ಮಾಡಲು ಬೆಂಬಲ ನೀಡುವಂತೆ ತಿಳಿಸಲಾಯಿತು.

ಹಾಗೂ ಬೆಳಗಾವಿ ಲೋಕಸಭಾ ಕ್ಷೇತ್ರದ ರಾಮದುರ್ಗದ ಗೊಡಚಿ ಶ್ರೀ ವೀರಭದ್ರೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ, ಶ್ರೀ ವೀರಭದ್ರೇಶ್ವರ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ನಾಡಿನ ಒಳಿತಿಗಾಗಿ ಪ್ರಾರ್ಥಿಸಲಾಯಿತು. ಬೆಳಗಾವಿ ಭಾಗದ ಜನರ ಸೇವೆ ಮಾಡಲು ಅವಕಾಶ ನೀಡಿ ಎಂದು ಮತದಾರರಲ್ಲಿ ವಿನಂತಿಸಿದ್ದೇನೆ ಎಂದು ಜಗದೀಶ್ ಶೆಟ್ಟರ್ ಹೇಳಿದರು.

## ಮೀಡಿಯಾ ಮಾನಿಟರಿಂಗ್ ಕೇಂದ್ರಕ್ಕೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಭೇಟಿ

### ನೀತಿಸಂಹಿತೆ ಉಲ್ಲಂಘನೆ, ಸುಳ್ಳು ಸುದ್ದಿಗಳ ಮೇಲೆ ನಿಗಾ ವಹಿಸಲು ಸೂಚನೆ



ಬೆಳಗಾವಿ: ಲೋಕಸಭಾ ಚುನಾವಣಾ ಹಿನ್ನೆಲೆಯಲ್ಲಿ ಮಾದರಿ ನೀತಿಸಂಹಿತೆ ಉಲ್ಲಂಘನೆ, ಸುಳ್ಳುಸುದ್ದಿ(ಫೇಕ್ ನ್ಯೂಸ್) ಹರಡುವಿಕೆ ಹಾಗೂ ಚುನಾವಣಾ ಜಾಹೀರಾತುಗಳ ಮೇಲೆ ನಿಗಾ ವಹಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ ನೀಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯ "ವಾರ್ತಾಭವನ"ದಲ್ಲಿ ಸ್ಥಾಪಿಸಲಾಗಿರುವ ಮೀಡಿಯಾ ಮಾನಿಟರಿಂಗ್ ಕೇಂದ್ರಕ್ಕೆ ಶುಕ್ರವಾರ(ಏ.5) ಭೇಟಿ ನೀಡಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಲು ಪೂರಕವಾಗಿ ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಮಾಧ್ಯಮ ಕಣ್ಗಾವಲು ಘಟಕ(ಮೀಡಿಯಾ ಮಾನಿಟರಿಂಗ್ ಕೇಂದ್ರ) ಸ್ಥಾಪಿಸಲಾಗಿದೆ.

ಮುದ್ರಣ ಹಾಗೂ ಎಲೆಕ್ಟ್ರಾನಿಕ್ ಮಾಧ್ಯಮಗಳಲ್ಲಿ ಪ್ರಸಾರವಾಗುವ ಚುನಾವಣಾ ಸುದ್ದಿ ಹಾಗೂ ಜಾಹೀರಾತುಗಳನ್ನು ಪ್ರತಿದಿನ ಪರಿಶೀಲನೆ ಮಾಡುವುದರ ಜತೆಗೆ ನೀತಿಸಂಹಿತೆ ಹಾಗೂ ನಿಯಮಾವಳಿ ಉಲ್ಲಂಘನೆ ಕಂಡುಬಂದರೆ ಚುನಾವಣಾಧಿಕಾರಿ, ಸಹಾಯಕ ಚುನಾವಣಾಧಿಕಾರಿ ಹಾಗೂ ಮಾದರಿ ನೀತಿಸಂಹಿತೆ ನೋಡಲ್ ಅಧಿಕಾರಿಗಳಿಗೆ ತಕ್ಷಣವೇ ಮಾಹಿತಿಯನ್ನು ನೀಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಮೀಡಿಯಾ ಮಾನಿಟರಿಂಗ್ ಕೇಂದ್ರದ ಕಾರ್ಯಚಟುವಟಿಕೆಗಳ ಕುರಿತು ಎಂಸಿಎಂಸಿ ನೋಡಲ್ ಅಧಿಕಾರಿ ಗುರುನಾಥ ಕಡಬೂರ ಮಾಹಿತಿಯನ್ನು ನೀಡಿದರು.

ಮೀಡಿಯಾ ಮಾನಿಟರಿಂಗ್ ಕೇಂದ್ರದ ಅಧಿಕಾರಿಗಳಾದ ಶಿಕ್ಷಣ ಇಲಾಖೆಯ ವಿಷಯ ಪರಿವೀಕ್ಷಕಿ ಶ್ರೀದೇವಿ ನಾಗನೂರ, ಮುಖ್ಯೋಪಾಧ್ಯಾಯ ಲಕ್ಷ್ಮಣ ತಳವಾರ, ತಾಂತ್ರಿಕ ಸಹಾಯಕರಾದ ಮಹಾಂತೇಶ ಪತ್ತಾರ, ಸಹ ಶಿಕ್ಷಕರಾದ ಹೊಳೆಪ್ಪ ನಾಯಕ, ಸುನೀಲ ಪಾಟೀಲ ಸೇರಿದಂತೆ ವಾರ್ತಾ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಎನ್ಡಿಡಿಎಫ್‌ಆಯ್ ನಿರ್ದೇಶಕರಾಗಿ ಕಹಾಮ ನಿರ್ದೇಶಕ ಬಾಲಚಂದ್ರ ಜಾರಕಿಹೊಳಿ ಪುನರಾಯ್ಕೆ



ಬೆಂಗಳೂರು*: ಕಹಾಮ ನಿರ್ದೇಶಕ, ಬೆಳಗಾವಿ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಅಧ್ಯಕ್ಷ, ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ರಾಷ್ಟ್ರೀಯ ಸಹಕಾರಿ ಡೈರಿ ಮಹಾ ಮಂಡಲ (ಎನ್ಡಿಡಿಎಫ್‌ಆಯ್)ದ ನಿರ್ದೇಶಕರಾಗಿ ಪುನ:ರಾಯ್ಕೆಯಾಗಿದ್ದಾರೆ.

ಗುಜರಾತ್ ರಾಜ್ಯದ ಆನಂದ್ ನಗರದಲ್ಲಿ ಏ-4 ರಂದು ನಡೆದ ಮಹಾ ಮಂಡಲದ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಬಾಲಚಂದ್ರ ಜಾರಕಿಹೊಳಿ ಅವರು ಮುಂದಿನ 5 ವರ್ಷಗಳ ಅವಧಿಗೆ ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಉಳಿದಂತೆ ಡಾ॥ಮೀನೇಶ್ ಶಾ (ಜಾರ್ಖಂಡ ಹಾಲು ಒಕ್ಕೂಟ), ಡಾ॥ ಮಂಗಲ್ಜೀತ್ ರಾಯ್ (ಸಿಕ್ಕಿಂ ಹಾಲು ಒಕ್ಕೂಟ), ಶಾಮಲ್ಭಾಯ್ ಪಟೇಲ್ (ಗುಜರಾತ ಹಾಲು ಒಕ್ಕೂಟ), ರಣಧೀರ್ ಸಿಂಗ್ (ಹರಿಯಾಣ ಹಾಲು ಒಕ್ಕೂಟ), ಕೆ.ಎಸ್.ಮಣಿ (ಕೇರಳ ಹಾಲು ಒಕ್ಕೂಟ), ನರೀಂದರ್ ಸಿಂಗ್ ಶೇರ್ಗಿಲ್ (ಪಂಜಾಬ ಹಾಲು ಒಕ್ಕೂಟ), ಸಮೀರ್ ಕುಮಾರ್ ಪರೀದಾ (ಪಶ್ಚಿಮ್ ಆಸ್ಸಾಂ ಹಾಲು ಒಕ್ಕೂಟ) ಹಾಗೂ ಎನ್ಡಿಡಿಬಿ ನಿರ್ದೇಶಕ ಎಸ್.ರೇಗುಪತಿ ಅವರು ನಾಮನಿರ್ದೇಶಿತ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ.

ಶುಕ್ರವಾರ ಏ-5 ರಂದು ಜರುಗಿದ ಆಡಳಿತ ಮಂಡಳಿಯ ನೂತನ ಅಧ್ಯಕ್ಷರಾಗಿ ಜಾರ್ಖಂಡ್ ಹಾಲು ಒಕ್ಕೂಟದ ಡಾ॥ಮೀನೇಶ್ ಶಾ ಅವರು ಅವಿರೋಧವಾಗಿ ಆಯ್ಕೆಯಾದರೆಂದು ಚುನಾವಣಾಧಿಕಾರಿಯಾಗಿದ್ದ ಆನಂದ್ ಜಿಲ್ಲಾಧಿಕಾರಿ ಪ್ರವೀಣ ಚೌಧರಿ ಪ್ರಕಟಿಸಿದರು.

ಏನಿದು: ಎನ್ಡಿಡಿಎಫ್‌ಆಯ್: ಎನ್‌ಸಿಡಿಎಫ್‌ಐ: ಸಹಕಾರಿ ಡೈರಿಗಳ ರಾಷ್ಟ್ರೀಯ ಒಕ್ಕೂಟವಾಗಿದ್ದು, ಸಹಕಾರಿಯಾಗಿ ಕಾರ್ಯನಿರ್ವಹಿಸುತ್ತಿದೆ. ಡೈರಿ ಸಹಕಾರಿ ಸಂಘಗಳ ಕಾರ್ಯಾಚರಣೆಯನ್ನು ಸುಗಮಗೊಳಿಸುವ ಉದ್ದೇಶದಿಂದ ರೂಪಗೊಂಡಿರುವ ಎನ್ಡಿಡಿಎಫ್‌ಆಯ್ ರಾಜ್ಯ ಸಹಕಾರ ಡೈರಿ ಫೇಡರೇಷನ್ನಗಳು, ಅಪೇಕ್ಸ್ ಯೂನಿಯನ್ನಗಳು, 240 ಜಿಲ್ಲೆಯ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟಗಳು, 2.30 ಲಕ್ಷ ಗ್ರಾಮ ಸಹಕಾರಿ ಹಾಲು ಉತ್ಪಾದಕರು, ತಳಮಟ್ಟದಲ್ಲಿರುವ ಸಮಾಜಗಳು ಒಟ್ಟಾರೆಯಾಗಿ ಈ ಸಹಕಾರಿ ಸಂಘಗಳು ಸದಸ್ಯತ್ವವನ್ನು ಪಡೆದಿದ್ದು, 180 ಲಕ್ಷಕ್ಕೂ ಅಧಿಕ ರೈತರು ಅದರಲ್ಲಿ 60 ಲಕ್ಷ ಮಹಿಳಾ ಸದಸ್ಯರು ಇದರಲ್ಲಿ ಸದಸ್ಯತ್ವವನ್ನು ಹೊಂದಿದ್ದಾರೆ.

ಹಾಲು ಮತ್ತು ಹಾಲಿನ ಪೂರೈಕೆಯನ್ನು ಸುಗಮಗೊಳಿಸುವಲ್ಲಿ ಎನ್ಡಿಎಫ್-ಆಯ್ ನಿರ್ಣಾಯಕವಾಗಿದ್ದು, 400 ವಿವಿಧ ರಕ್ಷಣಾ ಘಟಕಗಳಿಗೆ ಅದರ ಸಾಂಸ್ಥಿಕ ಮಾರಾಟ ವಿಭಾಗದ ಅಡಿಯಲ್ಲಿ ಉತ್ಪನ್ನಗಳು, ರಕ್ಷಣಾ ಸಚಿವಾಲಯದ ಅಡಿಯಲ್ಲಿ ಸೇನೆ, ವಾಯುಪಡೆ, ನೌಕಾ ಪಡೆ, ಮತ್ತು ಆಯ್ಟಿಬಿಪಿ ಹಲವಾರು ಘಟಕಗಳು ಗೃಹ ವ್ಯವಹಾರಗಳ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿದೆ. ವಾರ್ಷಿಕ ಸುಮಾರು 6 ಸಾವಿರ ಕೋಟಿ ರೂಗಳ ವ್ಯಾಪಾರ ವಹಿವಾಟು ನಡೆಸುವ ದೇಶದಲ್ಲಿಯೇ ಅತಿ ದೊಡ್ಡದಾದ ಹಿರಿಮೆಗೆ ಎನ್ಡಿಡಿಎಫ್‌ಆಯ್ ಪಾತ್ರವಾಗಿದೆ ಎಂದು ಮಹಾ ಮಂಡಲದ ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸ ಸಜ್ಜ ಅವರು ಸಂಸ್ಥೆಯ ಮಾಹಿತಿ ನೀಡಿದರು.

ಈ ಸಂಸ್ಥೆಗೆ ಕರ್ನಾಟಕ ಹಾಲು ಒಕ್ಕೂಟದಿಂದ ಅರಭಾವಿ ಶಾಸಕರೂ ಆಗಿರುವ ಕೆಎಮ್‌ಎಫ್ ನಿರ್ದೇಶಕ ಬಾಲಚಂದ್ರ ಜಾರಕಿಹೊಳಿ ಅವರು ಸತತ 2ನೇ ಅವಧಿಗೆ ಆಯ್ಕೆಯಾಗಿರುವುದು ಕರ್ನಾಟಕಕ್ಕೆ ಹೆಮ್ಮೆಯಾಗಿದೆ.

# ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆ; ಹೆಚ್ಚುತ್ತಿರುವ ತಾಪಮಾನ ಮತ್ತು ಕುಡಿಯುವ ನೀರು, ಮೇವು ಲಭ್ಯತೆ ಬಗ್ಗೆ ಜಾಗೃತಿ ಮೂಡಿಸಿ: ಜಿಲ್ಲಾಧಿಕಾರಿ

ಧಾರವಾಡ: ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ತಾಪಮಾನ ಹೆಚ್ಚಳವಾಗುತ್ತಿದ್ದು, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಇದರ ಬಗ್ಗೆ ಅರಿವು, ಸುರಕ್ಷತಾ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಿ, ಕುಡಿಯುವ ನೀರು, ಜಾನುವಾರು ಮೇವು, ನರೇಗಾ ಉದ್ಯೋಗ ನೀಡುತ್ತಿರುವ ಬಗ್ಗೆ ಪ್ರಗತಿ ಪರಿಶೀಲಿಸಿ, ಮಾತನಾಡಿದರು.

ಪ್ರಸ್ತುತ ದಿನದವರೆಗೆ ಜಿಲ್ಲೆಯ 37 ಗ್ರಾಮಗಳಿಗೆ 58 ಖಾಸಗಿ ಕೊಳವೆ ಬಾವಿಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಮತ್ತೆ ಯಾವುದೇ ಗ್ರಾಮದಲ್ಲಿ ನೀರಿನ ಸಮಸ್ಯೆ ಉಂಟಾದಲ್ಲಿ ತಕ್ಷಣ ಕ್ರಮ ಕೈಗೊಳ್ಳಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಬೋರವೆಲ್, ಪೈಪ್ ಲೈನ್, ಖಾಸಗಿ ಕೊಳವೆ ಬಾವಿ ಬಾಡಿಗೆ ಪಡೆಯಲು ಒಪ್ಪಂದ ಎಲ್ಲವೂ ಆಗಿದೆ. ಸಾರ್ವಜನಿಕರಲ್ಲಿ ನೀರಿನ ಮಿತ ಬಳಕೆ , ಅಪವ್ಯಯ, ಸೋರಿಕೆ ಬಗ್ಗೆ ಅರಿವು ಮೂಡಿಸಬೇಕೆಂದು ತಿಳಿಸಿದರು.

ನವಿಲುತೀರ್ಥ ಜಲಾಶಯದಿಂದ ಎಂ.ಆರ್ಬಿ.ಸಿ ಕಾಲುವೆ ಮುಖಾಂತರ ಜಿಲ್ಲೆಯ ನವಲಗುಂದ –37, ಅಣ್ಣಿಗೇರಿ–13, ಹುಬ್ಬಳ್ಳಿ–07 ಮತ್ತು ಕುಂದಗೋಳ–01 ಸೇರಿ ಒಟ್ಟು 58 ಕುಡಿಯುವ ನೀರಿನ ಕೆರೆಗಳನ್ನು ತುಂಬಿಸಲಾಗಿದ್ದು, ಮೇ ತಿಂಗಳ ಅಂತ್ಯದವರೆಗೆ ಈ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಹುಶಃ ಉಂಟಾಗುವುದಿಲ್ಲ. ಕೆರೆಗಳ ನೀರಿನ ಸುರಕ್ಷತೆ ಮತ್ತು ಸ್ವಚ್ಛತೆ ಬಗ್ಗೆ ಅಧಿಕಾರಿಗಳು ಗಮನ ನೀಡಬೇಕೆಂದು ಜಿಲ್ಲಾಧಿಕಾರಿಗಳು ಹೇಳಿದರು.

ಜಿಲ್ಲೆಯಲ್ಲಿ ರೈತರಿಗೆ ಅಗತ್ಯಕ್ಕೆ ತಕ್ಕಂತೆ ಮೇವು ಪೂರೈಕೆ ಮಾಡಲಾಗುತ್ತಿದೆ. ಈಗಾಗಲೇ ಜಿಲ್ಲೆಯ 7 ಸ್ಥಳಗಳಲ್ಲಿ ಮೇವು ಬ್ಯಾಂಕ್ ತೆರೆಯಲಾಗಿದ್ದು, ರೈತರು ಮೇವು ಪಡೆದುಕೊಳ್ಳುತ್ತಿದ್ದಾರೆ. ಮೇ ತಿಂಗಳನ್ನು ಗಮನದಲ್ಲಿಟ್ಟುಕೊಂಡು ರೈತ–ರಿಂದ ಮೇವು ಬೇಡಿಕೆ ಅಂದಾಜಿಸಿ, ಈಗಲೇ ಮೇವು ಪೂರೈಕೆಗೆ ಕ್ರಮ ಕೈಗೊಳ್ಳಿ. ರೈತರು ಪಶುಪಾಲಕರಿಗೆ ಹೆಚ್ಚು ತಾಪಮಾನ ಇರುವ ಈ ಸಂದರ್ಭದಲ್ಲಿ ಜಾನುವಾರು ಪಾಲನೆ ಮತ್ತು ಸುರಕ್ಷತೆ ಬಗ್ಗೆ ತಿಳುವಳಿಕೆ ನೀಡಿ ಅಗತ್ಯ ಔಷಧಿಗಳನ್ನು ಪೂರೈಸಿ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸೂಚಿಸಿದರು.

ನೀರಾವರಿ ಸೌಲಭ್ಯವಿರುವ ರೈತರಿಗೆ



ನವೆಂಬರ್ ತಿಂಗಳಲ್ಲಿ ಸುಮಾರು 37 ಸಾವಿರ ಮೇವು ಬೀಜಗಳ ಕಿಟ್ ವಿತರಿಸಲಾಗಿ–ತ್ತು. ಇದರಿಂದ ರೈತರಿಗೆ ಅಂದಾಜು 45 ಸಾವಿರ ಟನ್ ಮೇವು ಲಭ್ಯವಾಗಿರುತ್ತದೆ. ಈಗ ಮತ್ತೆ ಸರಕಾರದಿಂದ ಮೇವು ಬೀಜದ ಕಿಟ್ ಬಂದಿದ್ದು, ಅಗತ್ಯವಿರುವ ರೈತರಿಗೆ ವಿತರಿಸಿ ಎಂದು ಜಿಲ್ಲಾಧಿಕಾರಿಗಳು ನಿರ್ದೇಶಿಸಿದರು.

ವಿಫಲ ಕೊಳವೆ ಬಾವಿ ಮುಚ್ಚಿಸಿ : ಪ್ರತಿ ತಿಂಗಳು ಪಂಚಾಯತರಾಜ್ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಜಂಟಿ ಆಗಿ ತಮ್ಮ ವ್ಯಾಪ್ತಿಯ ಸಫಲ ಮತ್ತು ವಿಫಲ ಕೊಳವೆ ಬಾವಿಗಳ ಸಮೀಕ್ಷೆ ಮಾಡಿ ವರದಿ ನೀಡಲು ತಿಳಿಸಲಾಗಿದೆ. ಅದರಂತೆ ಈಗ ಬೇಸಿಗೆ ಕಾಲವಾಗಿರುವುದರಿಂದ ರೈತರು ಕೃಷಿ, ಕುಡಿಯುವ ನೀರಿಗಾಗಿ ಹೆಚ್ಚು ಹೆಚ್ಚು ಕೊಳವೆ ಬಾವಿ ತೋಡಿಸುತ್ತಾರೆ. ಅದರಲ್ಲಿ ನೀರು ಬಂದರೆ ಮೋಟಾರು ಇಳಿಸಿ ಬಳಕೆ ಮಾಡುತ್ತಾರೆ.

ನೀರು ಬರದಿದ್ದಲ್ಲಿ ಹಾಗೆ ತೆರೆದು ಬಿಟ್ಟು ಬಿಡುತ್ತಾರೆ. ಇದರಿಂದ ಮಕ್ಕಳ ಜೀವಕ್ಕೆ ಆಪತ್ತು ಆಗುವ ಸಾಧ್ಯವಿರುತ್ತದೆ. ಅಂತಹ ಅಪಾಯಕಾರಿ ಕೊಳವೆ ಬಾವಿಗಳನ್ನು ಬಂದ್ ಮಾಡಿಸಬೇಕು. ವಿಫಲ ಕೊಳವೆ ಬಾವಿಗಳನ್ನು ಕಡ್ಡಾಯವಾಗಿ ಮುಚ್ಚಿಸುವುದು ತಹಶೀಲ್ದಾರ್ ಹಾಗೂ ತಾಲ್ಲೂಕ ಪಂಚಾಯತ ಇ.ಓ ಗಳ ಕರ್ತವ್ಯವಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ರೈತರೊಂದಿಗೆ ನಾವಿದ್ದೇವೆ : ಬರಗಾಲದಲ್ಲಿ ಬಸವಳೆದಿರುವ ರೈತರಿಗೆ ಮಾಹಿತಿಯುಕ್ತ ಆಸರೆ ಆಗಲು ಜಿಲ್ಲಾಡಳಿತ ಆರಂಭಿಸಿರುವ ರೈತರೊಂದಿಗೆ ನಾವಿದ್ದೇವೆ ಅಭಿಯಾನವನ್ನು ಪ್ರತಿ ತಾಲ್ಲೂಕಿನಲ್ಲಿರುವ ಜಾನುವಾರು ಮಾರುಕಟ್ಟೆ , ದನಗಳ ಸಂತೆಯಲ್ಲಿ ಆಯೋಜಿಸಿ , ಜಿಲ್ಲಾಡಳಿತ , ತಾಲ್ಲೂಕು ಆಡಳಿತ ನಿಮ್ಮೊಂದಿಗೆ ಇದ್ದು, ನಿಮ್ಮ ಕಷ್ಟಗಳಿಗೆ ಸ್ಪಂದಿಸಲಿದೆ ಎಂಬ ಭರವಸೆಯನ್ನು ರೈತರಲ್ಲಿ ಮೂಡಿಸಬೇಕು.

ಧಾರವಾಡ ಜಿಲ್ಲಾಡಳಿತದಿಂದ ಜೂನ ತಿಂಗಳವರೆಗೆ ಬರಬಹುದಾದ ಕುಡಿಯುವ ನೀರಿನ ಸಮಸ್ಯೆ, ಜಾನುವಾರು ಮೇವು ಕೊರತೆ ಅಂದಾಜಿಸಿ ಸಾಕಷ್ಟು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.ರೈತರಿಗೆ, ಸಾರ್ವಜನಿಕರಿಗೆ ಸಮಸ್ಯೆಗಳಿದ್ದಲ್ಲಿ ಸಂಪರ್ಕಿಸಲು ಜಿಲ್ಲಾಧಿಕಾರಿಗಳ ಕಚೇರಿ, ತಹಶೀಲ್ದಾರ ಕಚೇರಿ ಮತ್ತು ತಾಲ್ಲೂಕು ಪಂಚಾಯತಗಳಲ್ಲಿ ಸಹಾಯವಾಣಿ ಆರಂಭಿಸಲಾಗಿದೆ, ಮೇವು ಬ್ಯಾಂಕ್ ತೆರೆದು, ಮೇವು ಪೂರೈಸಲಾಗುತ್ತಿದೆ. ಈ ಎಲ್ಲಾ ಮಾಹಿತಿ ಜಿಲ್ಲೆಯ ಪ್ರತಿ ಗ್ರಾಮಗಳಿಗೆ ತಲುಪಬೇಕು ಎಂದರು.

ಪ್ರತಿ ಗ್ರಾಮಪಂಚಾಯತಿಯಿಂದ ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಬರ ನಿರ್ವಹಣೆಯಲ್ಲಿ ಕೈಗೊಂಡಿರುವ ಕ್ರಮಗಳು, ಮೇವು ಲಭ್ಯತೆ, ಕುಡಿಯವ ನೀರು, ಸಹಾಯವಾಣಿಗಳ ಬಗ್ಗೆ ಡಂಗುರ ಸಾರುವ, ಟಂ, ಟಂ ಹೊಡೆದು ಹೇಳುವ ಮತ್ತು ಕಸದ ವಾಹನಗಳಲ್ಲಿ ಜಿಂಗಲ್, ಧ್ವನಿವರ್ಧಕ ಬಳಸಿ ಸಾರ್ವಜನಿಕರಿಗೆ ಮಾಹಿತಿ ತಲುಪಿಸಬೇಕು. ಜನರಿಗೆ ಮಾಹಿತಿ ಕೊರತೆ ಆಗದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶಿಸಿದರು.

ತಹಶೀಲ್ದಾರರು ಮತ್ತು ಪಶುಪಾಲನೆ ಅಧಿಕಾರಿಗಳು ಪ್ರತಿ ಜಾನುವಾರು ಮಾರುಕಟ್ಟೆಯಲ್ಲಿ ಅಭಿಯಾನ ಕುರಿತು ಹೆಚ್ಚು ಪ್ರಚಾರ ಮಾಡಬೇಕು. ಮಾರುಕಟ್ಟೆಗೆ ಬಂದಿರುವ ರೈತರನ್ನು ಮಾತನಾಡಿಸಿ, ಅವ–ರಿಗೆ ಮಾಹಿತಿ ನೀಡಬೇಕು. ಧ್ವನಿವರ್ಧಕ ಬಳಸಿ ಮುಂಜಾಗ್ರತಾ ಕ್ರಮಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಿ, ತಮ್ಮ ತಾಲ್ಲೂಕಿನಲ್ಲಿ ಯಾವುದೇ ರೀತಿಯ ತೊಂದರೆ ಆಗದಂತೆ ನಿಗಾ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ವಿಜಯಕುಮಾರ ಆಜೂರ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಪಶುಪಾಲನೆ ಇಲಾಖೆಯ ನಿರ್ದೇಶಕ ಡಾ. ರವಿ ನಿಲಿಗೌಡರ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಾ.ಕಿರಣ–ಕುಮಾರ, ಮಹಾನಗರ ಪಾಲಿಕೆಯ ಅಧೀಕ್ಷಕ ಅಭಿಯಂತರ ತಿಮ್ಮಪ್ಪ, ಭೂದಾಖಲೆಗಳ ಉಪನಿರ್ದೇಶಕ ಮೋಹನ ಶಿವಣ್ಣವರ ಸೇ–ರಿದಂತೆ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರು, ತಾ.ಪಂ ಇ.ಓ ಗಳು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗಳು ಸೇ–ರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

## ಜಿಲ್ಲಾ ಸ್ವೀಪ್ ಸಮಿತಿಯಿಂದ ಏ.07 ರಂದು ಸೈಕಲ್ ಜಾಥಾ

ಬಳ್ಳಾರಿ: ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮತದಾನದ ಮಹತ್ವ ಕುರಿತು ಮತದಾರರಲ್ಲಿ ಜಾಗೃತಿ ಮೂಡಿಸಲು ಏ.07 ರಂದು ಬೆಳಿಗ್ಗೆ 07 ಗಂಟೆಗೆ ನಗರದ ಡಾ.ರಾಜ್ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಿಂದ ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ತಿಳಿಸಿದ್ದಾರೆ.

**ಸೈಕಲ್ ಜಾಥಾ ಮಾರ್ಗ:**

ಸೈಕಲ್ ಜಾಥಾವು ಮುನಿಸಿಪಲ್ ಕಾಲೇಜು ಮೈದಾನದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ–ಹೆಚ್.ಆರ್.ಗವಿಯಪ್ಪ ವೃತ್ತ–ಕೋಟೆ ಪ್ರದೇಶ(ಶ್ರೀಮೇಧಾ ಕಾಲೇಜು ಮುಂಭಾಗ)–ಮೊದಲನೇ ರೈಲ್ವೆ ಗೇಟ್–ಸುಧಾ ಕ್ರಾಸ್–ಇನ್ಫ್ಯಾಂಟರಿ ರಸ್ತೆ–ಎಸ್ಪಿ ವೃತ್ತದ ಮೂಲಕ ದುರ್ಗಮ್ಮ ದೇವಸ್ಥಾನದ ಆವರಣಕ್ಕೆ ತಲುಪಿ ಅಂತ್ಯಗೊಳ್ಳಲಿದೆ.

ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸೈಕಲ್ನೊಂದಿಗೆ ಹಾಜರಾಗಬೇಕು. ಜಿಲ್ಲಾ ಪಂಚಾಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಅವರು ತಿಳಿಸಿದ್ದಾರೆ.

## ಸಿರುಗುಪ್ಪ: ಆಸ್ತಿ ತೆರಿಗೆ ಸಕಾಲದಲ್ಲಿ ಪಾವತಿಸಿ

ಬಳ್ಳಾರಿ: ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿ 2024–25ನೇ ಸಾಲಿನ ಆಸ್ತಿ ತೆರಿಗೆ ಪಾವತಿಗೆ ಏಪ್ರಿಲ್ ತಿಂಗಳಲ್ಲಿ ಶೇ.5 ರಷ್ಟು ರಿಯಾಯಿತಿ ಇದ್ದು, ಮೇ ಮತ್ತು ಜೂನ್ ತಿಂಗಳುಗಳಲ್ಲಿ ದಂಡ ರಹಿತವಾಗಿ ಆಸ್ತಿ ತೆರಿಗೆ ಪಾವತಿಸಲು ಅವಕಾಶವಿರುವುದರಿಂದ ಸಕಾಲದಲ್ಲಿ ಆಸ್ತಿ ತೆರಿಗೆ ಪಾವತಿಸಬೇಕು ಎಂದು ಸಿರುಗುಪ್ಪ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ. ನೀರಿನ ಶುಲ್ಕ, ಉದ್ದಿಮೆ ಪರವಾನಿಗೆ ಶುಲ್ಕವನ್ನು ಸಕಾಲದಲ್ಲಿ ಪಾವತಿಸಬೇಕು ಎಂದು ಸಾರ್ವಜನಿಕರಲ್ಲಿ ಕೋರಿದ್ದಾರೆ.

**ಆಸ್ತಿ ತೆರಿಗೆಯ ವಿವರ:**

ಏ.04 ರಿಂದ 30 ರ ವರೆಗೆ ಶೇ.5 ರಷ್ಟು ತೆರಿಗೆ ವಿನಾಯಿತಿ ಇರುತ್ತದೆ. ಮೇ 01 ರಿಂದ ಜೂ.30 ರ ವರೆಗೆ ದಂಡರಹಿತ ಆಸ್ತಿ ತೆರಿಗೆ ಪಾವತಿಸಲು ಅವಕಾಶ. ಜುಲೈ 01 ರಂದು ತೆರಿಗೆ ಪಾವತಿಸುವವರೆಗೆ ಪ್ರತಿ ತಿಂಗಳಿಗೆ ಶೇ.2ರಂತೆ ಆಸ್ತಿ ತೆರಿಗೆಯ ಮೇಲೆ ದಂಡ ವಿಧಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರುಗೋಡು ತಾಲ್ಲೂಕು ಸ್ವೀಪ್ ಸಮಿತಿಯಿಂದ ಭಾಷಣ ಸ್ಪರ್ಧೆ ಏ.06 ರಂದು

ಬಳ್ಳಾರಿ: ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಕುರುಗೋಡು ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್, ತಾಲ್ಲೂಕು ಸ್ವೀಪ್ ಸಮಿತಿ, ಪುರಸಭೆ ಇವರ ವತಿಯಿಂದ ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮತದಾನ ಜಾಗೃತಿ ಮೂಡಿಸಲು ಏ.06 ರಂದು ಬೆಳಿಗ್ಗೆ 09 ಗಂಟೆಗೆ ಪಟ್ಟಣದ ಬಾದನಹಟ್ಟಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ "ಮತದಾನ ಜಾಗೃತಿ" ಎಂಬ ವಿಷಯ ಕುರಿತು ಭಾಷಣ ಸ್ಪರ್ಧೆ ಏರ್ಪಡಿಸಲಾಗಿದೆ ಎಂದು ತಾಲ್ಲೂಕು ಕಾರ್ಯ ನಿರ್ವಾಹಕ ಅಧಿಕಾರಿ ನಿರ್ಮಲಾ ಅವರು ತಿಳಿಸಿದ್ದಾರೆ.

ಆಸಕ್ತ ಶಾಲಾ ಕಾಲೇಜು ವಿದ್ಯಾರ್ಥಿಗಳು, ಸರ್ಕಾರಿ ನೌಕರರು, ಸಾರ್ವಜನಿಕರು ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಪಂಚಾಯಿತಿಯ ಡಿ.ಇ.ಓ ವೀರೇಶ್.ಜಿ ಅವರ ಮೊ.9742769150 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಲೋಕಾಯುಕ್ತ, ಧಾರವಾಡ; ಏಪ್ರಿಲ್–2024 ರಂದು ಅಹವಾಲು ಸ್ವೀಕಾರ

ಧಾರವಾಡ: ಕರ್ನಾಟಕ ಲೋಕಾಯುಕ್ತ, ಧಾರವಾಡ ಕಚೇರಿಯ ಪೊಲೀಸ್ ಅಧಿಕಾರಿಗಳ ಸಾರ್ವಜನಿಕ ಕುಂದು ಕೊರತೆ ಸಭೆಯನ್ನು ಏಪ್ರಿಲ್ 10 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ನಡೆಸಲಾಗುತ್ತದೆ ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಏಪ್ರಿಲ್ 10 ರಂದು ತಾಲ್ಲೂಕು ಪಂಚಾಯತ ಕಾರ್ಯಾಲಯ ಸಭಾಭವನ, ಕುಂದಗೋಳದಲ್ಲಿ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಸಾರ್ವಜನಿಕ ಅಹವಾಲು ಸ್ವೀಕರಿಸುವ ಕುರಿತು ನಿಗದಿಪಡಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಧಾರವಾಡ ಲೋಕಸಭಾ ಮತಕ್ಷೇತ್ರದ ಚುನಾವಣಾ ಮಾದರಿ ನೀತಿ ಸಂಹಿತೆ ಜಿಲ್ಲಾ ನೋಡಲ್ ಅಧಿಕಾರಿ ಮೋನಾ ರೋತ್ ಅವರು ಇಂದು ಬೆಳಿಗ್ಗೆ ಅಳ್ನಾವರ ಮತ್ತು ಗೋವಾ ರಸ್ತೆಯ ಕಡಬಗಟ್ಟಿ ಕ್ರಾಸ್ ಚೆಕ್ಪೋಸ್ಟ್ನಲ್ಲಿ ವಾಹನಗಳ ತಪಾಸಣೆ ಮಾಡಿ, ಚೆಕ್ಪೋಸ್ಟ್ ಅಧಿಕಾರಿಗಳ ಕಾರ್ಯ ಪರಿಶೀಲಿಸಿದರು.

## ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಿ: ಪ್ರೊ.ರಾಜಪ್ಪ ದಳವಾಯಿ

ಬಳ್ಳಾರಿ: ಪುಸ್ತಕಗಳು ಜ್ಞಾನ ವೃದ್ಧಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಹಾಗಾಗಿ ಪ್ರತಿಯೊಬ್ಬರೂ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ಬೆಂಗಳೂರು ವಿಶ್ವವಿದ್ಯಾಲಯದ ಕನ್ನಡ ಅಧ್ಯಾಪಕರು ಹಾಗೂ ನಾಟಕಕಾರರಾದ ಪ್ರೊ.ರಾಜಪ್ಪ ದಳವಾಯಿ ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ. ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಕನ್ನಡ ಮತ್ತು ಇಂಗ್ಲೀಷ್ ಹಾಗೂ ಪ್ರದರ್ಶನ ಕಲೆ(ನಾಟಕ) ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಆಯೋಜಿಸಿದ್ದ ಪ್ರೊ.ಎನ್.ಶಾಂತನಾಯ್ಕ ಅವರು ರಚಿಸಿರುವ 'ಆ ದಿನಗಳ ಮಾತು ಈಗೇಕೆ' ಪುಸ್ತಕ ಬಿಡುಗಡೆ ಹಾಗೂ




'ನಾಟಕ ರಚನಾ ಕಮ್ಮಟ–2024' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವಕ್ಕೆ ಕನ್ನಡ ಸಾಹಿತಿಗಳ ಕೊಡುಗೆ ಅಪಾರವಾಗಿದೆ. ನಾಟಕಗಳು ಮನುಷ್ಯನ ನಿಜ ರೂಪ ತಿಳಿಸುತ್ತವೆ. ಪ್ರಸ್ತುತ ದಿನಗಳಲ್ಲಿ ಪುಸ್ತಕ ಓದುವ ಹವ್ಯಾಸ ಕ್ಷೀಣಿಸುತ್ತಿರುವುದು ಬೇಸರದ ಸಂಗತಿಯಾಗಿದ್ದು, ಪ್ರತಿಯೊಬ್ಬರು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳವುದಥ–ರಿಂದ ಜ್ಞಾನವೃದ್ಧಿಸುತ್ತದೆ ಹಾಗೂ ಸಮಾಜದಲ್ಲಿನ ತಾರತಮ್ಯವನ್ನು ಹೋಗಲಾಡಿಸಬಹುದು ಎಂದು ಹೇಳಿದರು.

ಬಳ್ಳಾರಿಯ ಸಾಹಿತಿಗಳಾದ ಪಿ.ಆರ್. ವೆಂಕಟೇಶ್ ಪುಸ್ತಕ ಕುರಿತು ಮಾತನಾಡಿ, ಪುಸ್ತಕ ಓದುವಿಕೆಯಿಂದ ಬರುವ ಕಷ್ಟಗಳನ್ನು ಸುಲಭವಾಗಿ ನಿವಾ–ರಿಸಬಹುದು. 'ಆ ದಿನಗಳ ಮಾತು ಈಗೇಕೆ' ಪುಸ್ತಕವು ತಂದೆ ಮತ್ತು ಮಗನ ಭಾಂದವ್ಯ ವ್ಯಕ್ತಪಡಿಸುತ್ತದೆ. ಇಂತಹ ಪುಸ್ತಕಗಳಿಂದ ಸಮಾಜದಲ್ಲಿ ಉತ್ತಮವಾದ ವಾತಾವರಣ ನಿರ್ಮಾಣವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ. ರಮೇಶ್ ಓಲೇಕಾರ್ ಮಾತನಾಡಿ, ಇಂದಿನ ಪೀಳಿಗೆಯಲ್ಲಿ ಓದುವ, ಬರೆಯುವ ಹವ್ಯಾಸಗಳು ಕುಂಠಿತವಾಗಿವೆ. ವಿಶ್ವವಿದ್ಯಾಲಯಗಳಲ್ಲಿ ಇಂತಹ ಕಾರ್ಯಕ್ರಮಗಳಿಂದ ವಿದ್ಯಾರ್ಥಿಗಳಲ್ಲಿ ಸಾಹಿತ್ಯ, ಕಲೆಗಳ ಮಹತ್ವವನ್ನು ತಿಳಿದುಕೊಳ್ಳಲು ಸಹಕಾರಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಕನ್ನಡ ಅಧ್ಯಯನ ವಿಭಾಗ ಮುಖ್ಯಸ್ಥ ಪ್ರೊ.ರಾಬರ್ಟ್ ಜೋಸ್, ಇಂಗ್ಲಿಷ್ ಮತ್ತು ಪ್ರದರ್ಶನ ಕಲೆ ನಾಟಕ ವಿಭಾಗದ ಮುಖ್ಯಸ್ಥ ಪ್ರೊ. ಎನ್.ಶಾಂತನಾಯ್ಕ, ನಾಟಕ ವಿಭಾಗದ ಅತಿಥಿ ಉಪನ್ಯಾಸಕ ಡಾ.ಅಣ್ಣಾಜಿ ಕೃಷ್ಣಾರೆಡ್ಡಿ ಹಾಗೂ ಡಾ.ಸಹನಾ ಪಿಂಜಾರ, ಹೇಮೇಶ್ವರ.ಕೆ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜ–ಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಡಾ.ಬಾಬು ಜಗಜೀವನ್ ರಾಮ್ ಜಯಂತಿ: ಜಿಲ್ಲಾಡಳಿತದಿಂದ ಸರಳ ಮತ್ತು ಸಾಂಕೇತಿಕ ಆಚರಣೆ



ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಭಾರತದ ಮಾಜಿ ಪ್ರಧಾನಿ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ್ ರಾಮ್ ಅವರ 117ನೇ ಜಯಂತಿ ಅಂಗವಾಗಿ ಶುಕ್ರವಾರದಂದು ನಗರದ ನಲ್ಲಚೆರುವು ಪ್ರದೇಶದ ಡಾ.ಬಾಬು ಜಗಜೀವನ್ ರಾಮ್ ಭವನದ ಮುಂಭಾಗದಲ್ಲಿನ ಬಾಬು ಜಗಜೀವನ್ ರಾಮ್ ಅವರ ಪ್ರತಿಮೆಗೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಪುಷ್ಪ ನಮನ ಸಲ್ಲಿಸಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ಹಿನ್ನಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಿರುವುದರಿಂದ ಸರಳ ಮತ್ತು ಸಾಂಕೇತಿಕವಾಗಿ ಆಚರಿಸಲಾಯಿತು.

ಈ ಸಂಧರ್ಭದಲ್ಲಿ ಜಿಲ್ಲಾ ಪಂಚಾಯತ್ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಎನ್ ಝುಬೇರ್, ಹೆಚ್ಚುವರಿ ಪೊಲೀಸ್ ವರಿಗಣ್ಠಧಿಕಾರಿ ನವೀನ್ ಕುಮಾರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸತೀಶ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕಢ ನಿರ್ದೇಶಕಿ ಮಮತಾ.ಪಿ ಸೇರಿದಂತೆ ಅಧಿಕಾರಿ, ಸಿಬ್ಬಂದಿ ವರ್ಗದವರು ಸೇ–ರಿದಂತೆ ದಲಿತ ಮುಖಂಡರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ಜಯಂತಿ ಆಚರಣೆ

ಧಾರವಾಡ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಇಂದು ಬೆಳಿಗ್ಗೆ ಜಿಲ್ಲಾಧಿಕಾ–ರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಹಸಿರು ಕ್ರಾಂತಿಯ ಹರಿಕಾರ ಹಾಗೂ ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ಜಯಂತಿಯನ್ನು ಆಚರಿಸಲಾಯಿತು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ಭಾವಚಿತ್ರಕ್ಕೆ ಪೂಜೆಯೊಂದಿಗೆ ಪುಗಣ್ಪರ್ಪಣೆ ಸಲ್ಲಿಸಿ, ನಮಿಸಿದರು.

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ ಗೋಪಾಲ ಎಂ. ಬ್ಯಾಕೋಡ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪಿ.ಶುಭಾ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಮಾಜ



ಗಣ್ಯರು, ಹಿರಿಯ ನಾಗರಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಶ್ರೀ ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ: ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ ರಾಂ ಅವರ ಜಯಂತಿ ಹಿನ್ನಲೆಯಲ್ಲಿ ಇಂದು ಬೆಳಿಗ್ಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಹಾನಗರ ಪಾಲಿಕೆ ಹತ್ತಿರದಲ್ಲಿರುವ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಮತ್ತು ಕಲಾಭವನ ಆವರಣದಲ್ಲಿರುವ ಶ್ರೀ ಬಸವೇಶ್ವರರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು.

# ಅಸ್ಪೃಶ್ಯತೆಯ ವಿರುದ್ಧದ ಹೋರಾಟದಲ್ಲಿ ಜಗಜೀವನ ರಾಯ್ ಪ್ರಮುಖರು

ಭಾರತದ ಸ್ವಾತಂತ್ರ್ಯ ಪೂರ್ವ ಮತ್ತು ಸ್ವಾತಂತ್ರ್ಯಾನಂತರದ ರಾಜಕಾರಣದಲ್ಲಿ ಬಾಬು ಜಗಜೀವನ ರಾಮ್ ಪ್ರಮುಖ ಹೆಸರು. ಜಗಜೀವನ ರಾಮ್ ಅವರ ತಂದೆ ಶೋಭಿರಾಮ್ ಬ್ರಿಟಿಷರ ಭಾರತೀಯ ಸೇನೆಯಲ್ಲಿದ್ದರು. ಹಲವು ಕಡೆಗಳಲ್ಲಿ ಕೆಲಸಮಾಡಿ, ಪೆಶಾವರದಲ್ಲಿ ಕೆಲಕಾಲ ಕೆಲಸ ಮಾಡಿದ ನಂತರ ತಮ್ಮ ಹುದ್ದೆಯನ್ನು ತ್ಯಜಿಸಿ ಬಿಹಾರಕ್ಕೆ ಬಂದು ಅರಾ ಪಟ್ಟಣದ ಸಮೀಪದ ಚಾಂದ್ವಾ ಗ್ರಾಮದಲ್ಲಿ ಭೂಮಿಯನ್ನು ಕೊಂಡು ಕೃಷಿಯನ್ನು ಆರಂಭಿಸಿದರು. ಜಗಜೀವನ್ ರಾಮ್ ಅವರು 1908ರ ಏಪ್ರಿಲ್ 5ರಂದು ಚಾಂದ್ವಾ ಗ್ರಾಮದಲ್ಲಿ ಜನಿಸಿದರು.

ಬಾಲಕ ಜಗಜೀವನ್ ರಾಮ್ 1914ರಲ್ಲಿ ಶಾಲೆಗೆ ಹೋಗಲು ಆರಂಭಿಸಿದ ದಿನಗಳಲ್ಲೇ ಅವರ ತಂದೆ ನಿಧನರಾದರು. ಆದರೆ ತಾಯಿ ವಾಸಂತಿದೇವಿ ಧೃತಿಗೆಡಲಿಲ್ಲ. ಮಗನ ವಿದ್ಯಾಭ್ಯಾಸವನ್ನು ಬೆಂಬಲಿಸಿದರು. ಬಾಲಕ ರಾಮ್ ಆರಾದಲ್ಲಿನ ಮಾಧ್ಯಮಿಕ ಶಾಲೆಯನ್ನು ಪ್ರವೇಶಿಸಿದಾಗ ಎರಡು ಮಡಿಕೆಗಳಲ್ಲಿ ನೀರನ್ನು ಇಡಲಾಗುತ್ತಿತ್ತು. ಒಂದು ಮಡಿಕೆಯ ನೀರು ಹಿಂದೂ ಮಕ್ಕಳಿಗೆ; ಮತ್ತೊಂದು ಮುಸ್ಲಿಂ ಮಕ್ಕಳಿಗೆ. ರಾಮ್ ಹಿಂದೂ ಮಡಿಕೆಯ ನೀರನ್ನು ಕುಡಿದಾಗ ದೂರು ಪ್ರಿನ್ಸಿಪಾಲರಿಗೆ ಹೋಯಿತು. ಪ್ರಿನ್ಸಿಪಾಲರು ಮೂರನೆಯ ಮಡಿಕೆಯೊಂದನ್ನು ಇಡಿಸಿ, ಅದು ಅಸ್ಪೃಶ್ಯ ಮಕ್ಕಳಿಗೆಂದು ಹೇಳಿದರು. ಮೊದಲ ಬಾರಿಗೆ ಅಸ್ಪೃಶ್ಯತೆಯ ಅಪಮಾನ ರಾಮ್ ಅವರನ್ನು ತಟ್ಟಿತು. ಇದರಿಂದ ಸಿಟ್ಟಿಗೆದ್ದ ಬಾಲಕ ರಾಮ್ ಎರಡು ಬಾರಿ ಈ ಮಡಿಕೆಯನ್ನು ಒಡೆದು ಹಾಕಿ ತಮ್ಮ ಕೋಪವನ್ನು ಪ್ರದರ್ಶಿಸಿದರು. ಪ್ರಿನ್ಸಿಪಾಲರೇನೋ ಈ ಮೂರನೆಯ ಮಡಿಕೆಯನ್ನು ತೆಗೆಸಿದರು. ಆದರೆ ಈ ಜಾತಿಪದ್ಧತಿಯ ಅಪಮಾನದ ಗಾಯ ಬಾಲಕ ರಾಮ್ ಅವರ ಎದೆಯಾಳಕ್ಕಿಳಿಯಿತು. ಮುಂದೆ ತಮ್ಮ ಜೀವನದುದ್ದಕ್ಕೂ ರಾಮ್ ನಡೆಸಿದ ಎಲ್ಲ ಚಟುವಟಿಕೆಗಳ ಹಿಂದೆ ಈ ನೋವು ಉಳಿದುಕೊಂಡೇ ಇತ್ತು. ಇಂಥ ಜಾತಿ ಅಪಮಾನದಿಂದ ದಲಿತರನ್ನು ಪಾರುಮಾಡುವ ಆಶಯವೇ ರಾಮ್ ಅವರ ಎಲ್ಲ ಚಟುವಟಿಕೆಗಳ ಪ್ರಧಾನ ಆಶಯವಾಗಿ ಮಾರ್ಪಟ್ಟಿತು.

ಒಮ್ಮೆ ವಿದ್ಯಾರ್ಥಿ ದೆಸೆಯಲ್ಲಿ ಇವರ ಪುಟ್ಟ ಭಾಷಣವನ್ನು ಮೆಚ್ಚಿದ ಪಂಡಿತ್ ಮದನ್ ಮೋಹನ್ ಮಾಳವೀಯ ಇವರನ್ನು ಬನಾರಸ್ ಹಿಂದೂ ವಿಶ್ವವಿದ್ಯಾಲಯಕ್ಕೆ ಸೇರಲು ಆಹ್ವಾನಿಸಿದರು. ಅಲ್ಲಿ ದಲಿತ–ರಿಗೆ ಊಟಬಡಿಸುವುದರ ನಿರಾಕರಣೆ ಮಾಡುವುದರ ಜೊತೆಗೆ, ಕ್ಷೌರಕ್ಕಾಗಿ ಸಹಾ ಅಪರೂಪಕ್ಕೆ ಬರುವ ದಲಿತ ಕ್ಷೌರಿಕನಿಗೆ ಕಾಯುವಂತಹ ಘಟನೆಗಳಿಂದ ರೊಚ್ಚಿಗೆದ್ದು ಹೋರಾಟ ನಡೆಸಿದರಲ್ಲದೆ, ಇಂಟರ್ ಮೀಡಿಯೆಟ್ ನಂತರ ಅಲ್ಲಿಂದ ಹೊರನಡೆದು ಕೊಲ್ಕತ್ತಾ ವಿಶ್ವವಿದ್ಯಾಲಯದಿಂದ 1931ರಲ್ಲಿ ಬಿ.ಎಸ್ಸಿ ಪದವಿ ಪಡೆದರು.

ಜಗಜೀವನ್ ರಾಮ್ ಪ್ರತಿಭೆಯ ಜೊತೆಗೆ ಸ್ಪಷ್ಟ ಗ್ರಹಿಕೆ, ಒಳನೋಟ, ತತ್ವಬದ್ಧತೆ, ನಿಷ್ಠೆಗಳನ್ನೂ ಉಳ್ಳವರಾಗಿದ್ದರು. ತಾವು ಬಂದ ಸಮುದಾಯ, ಅದರ ಒಳಗುದಿ, ನೋವು, ಅಪಮಾನ, ವರ್ಣ ವ್ಯವಸ್ಥೆ ಸೃಷ್ಟಿಸಿದ ಕಠೋರ ಸನ್ನಿವೇಶ ಎಲ್ಲವನ್ನೂ ಅರಿಯುವ ಪ್ರಬುದ್ಧ ಚಿಂತನೆಯೂ ಅವರಲ್ಲಿತ್ತು. ಹೀಗಾಗಿಯೇ ಅವರು ಅವಮಾನಗಳನ್ನು, ಅದರ ಪೂರ್ವಾಪರಗಳನ್ನು, ಒಟ್ಟು ವ್ಯವಸ್ಥೆಯ ಮನೋಧರ್ಮವನ್ನು ಅರಿಯಬಲ್ಲವರಾಗಿದ್ದರು. ಅಪಮಾನಗಳನ್ನು ದಾಟುವುದು ಆ ಹೊತ್ತಿನ ಕ್ರಿಯೆ ಮಾತ್ರವಲ್ಲ ಮತ್ತು ವೈಯಕ್ತಿಕ ಸಾಧನೆಯೂ ಅಲ್ಲ ಎಂದು ತಿಳಿದಿದ್ದ ರಾಮ್ ತನ್ನ ಜನರ ಅಪಮಾನವನ್ನು ಕಾಲಾಂತರದಲ್ಲಿ ಶಾಶ್ವತವಾಗಿ ಪರಿಹ–ರಿಸುವುದು ಹೇಗೆ ಎಂಬ ದಿಕ್ಕಿನಲ್ಲಿ ಚಿಂತಿಸಿ ಕ್ರಿಯಾಶೀಲರಾದರು. ಅದನ್ನು ವೈಯಕ್ತಿಕ ಹೋರಾಟವನ್ನಾಗಿ ಮಾಡಿಕೊಳ್ಳದೆ, ತುಳಿತಕ್ಕೊಳಗಾದ ಸಮುದಾಯದ ಹೋರಾಟವನ್ನಾಗಿ ಮಾಡಿದರು.

ರಾಮ್ ಅವರಿಗಿದ್ದ ಕನಸುಗಳಲ್ಲಿ ಮುಖ್ಯವಾದದ್ದು ತಾವು ಉನ್ನತ ಮಟ್ಟದ ವಿಜ್ಞಾನಿಯಾಗಬೇಕೆಂಬುದು. ಆದ–



ರೆ ಭಾರತದಲ್ಲಿನ ಪರಿಸ್ಥಿತಿಯಿಂದಾಗಿ ರಾಮ್ ತಮ್ಮ ದಿಕ್ಕನ್ನು ಬದಲಿಸಿದರು. ಸಮಾಜವಿಜ್ಞಾನ, ರಾಜಕೀಯ, ಹೋರಾಟ, ತನ್ನಂಥ ಅಪಮಾನಕ್ಕೊಳಗಾದವರ ಸಂಘಟನೆ, ನ್ಯಾಯಬದ್ಧ ಹಕ್ಕುಗಳಿಗೆ ಮತ್ತು ಸಮಾನತೆಗಾಗಿ ಹೋರಾಟ ಇವೇ ರಾಮ್ ಅವರ ಬದುಕಿನ ಆಸಕ್ತಿಗಳಾದವು.

ಬನಾರಸ್ನಲ್ಲಿದ್ದ ಸಂದರ್ಭದಲ್ಲಿಯೇ ರಾಮ್ ದಲಿತ ವಿದ್ಯಾರ್ಥಿಗಳನ್ನು ಸಂಘಟಿಸಿ ಸಾಮಾಜಿಕ ತಾರತಮ್ಯದ ವಿರುದ್ಧ ಪ್ರತಿಭಟನೆ ಮಾಡಿದರು. ವಿದ್ಯಾರ್ಥಿ ದೆಸೆಯಿಂದಲೇ ತಾವೊಬ್ಬ ದಲಿತರ ಸಮರ್ಥ ನಾಯಕ ಎಂಬುದನ್ನೂ ತೋರಿಸಿಕೊಟ್ಟರು. ಕೊಲ್ಕತ್ತಾ ಅವರ ವ್ಯಕ್ತಿತ್ವವನ್ನು ಇನ್ನಷ್ಟು ಹಿಗ್ಗಿಸಿತು. ಕೊಲ್ಕತ್ತಾದಲ್ಲಿ ರಾಮ್ ಜಾತಿ ವ್ಯವಸ್ಥೆಯ ದುಷ್ಟಮುಖದ ವಿರುದ್ಧ ಸಮ್ಮೇಳನಗಳನ್ನು ನಡೆಸಿದರು. ಕ್ರಮೇಣದಲ್ಲಿ ಮಜ್ದೂರ್ ಸಂಘಟನೆಯಲ್ಲಿ ಆಸಕ್ತಿ ವಹಿಸಿದ ರಾಮ್ ತಮ್ಮ ಬುದ್ಧಿಮತ್ತೆ ಮತ್ತು ಸಂಘಟನೆಯ ಚಾತುರ್ಯದಿಂದ ವೆಲ್ಲಿಂಗ್ಟನ್ ಚೌಕದಲ್ಲಿ 50,000 ಕಾರ್ಮಿಕರನ್ನು ಸೇರಿಸಿ ಬ.ಹತ್ ಮಜ್ದೂರ್ ರ್ಯಾಲಿಯನ್ನು ಯಶಸ್ವಿಯಾಗಿ ನಿಭಾಯಿಸಿದರು. ಇದು ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಗಮನವನ್ನೂ ಸೆಳೆಯಿತು.

ಮುಂದೆ ದಲಿತ ನಾಯಕರಾಗಿ ರೂಪುಗೊಂಡ ಜಗಜೀವನ್ ರಾಮ್ ಅವರಿಗೆ ಬಿಹಾರ ಕಾರ್ಯಕ್ಷೇತ್ರವಾಯಿತು. ಗಾಂಧೀ–ಜಿಯವರು ಆರಂಭಿಸಿದ್ದ ಅಸ್ಪೃಶ್ಯತೆಯ ವಿರುದ್ಧದ ಹೋರಾಟದಲ್ಲಿ ರಾಮ್ ಪಾಲ್ಗೊಂಡರು. 1934ರಲ್ಲಿ ಬಿಹಾರದ ಭೂಕಂಪದಲ್ಲಿ ನೊಂದವರಿಗೆ ನೆರವಾಗುವ ಕಾರ್ಯದಲ್ಲಿ ಸಕ್ರಿಯರಾದರು.

1935 ರಲ್ಲಿ ದಲಿತರ ಸಮಾನತೆಗಾಗಿ ಹೋರಾಡುವ ಉದ್ದೇಶದಿಂದ ಅಸ್ತಿತ್ವಕ್ಕೆ ಬಂದ 'ಅಖಿಲ ಭಾರತ ದಮನಿತ ವರ್ಗಗಳ ಒಕ್ಕೂಟ'ವನ್ನು ಸ್ಥಾಪಿಸುವಲ್ಲಿ ಜಗಜೀವನ್ ರಾಮ್ ನಿರ್ವಹಿಸಿದ ಪಾತ್ರ ಮಹತ್ವದ್ದಾಗಿ–ತ್ತು. ಜಗಜೀವನ ರಾಮ್ ರವರು ಹಲವು ಬಾರಿ ಜೈಲುವಾಸವನ್ನು ಅನುಭವಿಸಿದರು. ಎರಡನೇ ಜಾಗತಿಕ ಯುದ್ಧದಲ್ಲಿ ಭಾರತ ಪಾಲ್ಗೊಳ್ಳುವುದನ್ನು ಅವರು ಬಲವಾಗಿ ಖಂಡಿಸಿದರು. 'ಬ್ರಿಟಿಷರೇ ಭಾರತ ಬಿಟ್ಟು ತೊಲಗಿ' ಚಳವಳಿಯಲ್ಲಿ ಭಾಗವಹಿಸಿ ಜೈಲು ಶಿಕ್ಷೆಗೆ ಗುರಿಯಾದರು. 1935 ರಲ್ಲಿ ನಡೆದ ಹಿಂದೂ ಮಹಾಸಭಾದ ಅಧಿವೇಶನದಲ್ಲಿ ಜಗಜೀವನ ರಾಮ್ ಗೊತ್ತುವಳಿಯೊಂದನ್ನು ಮಂಡಿಸಿ ದಲಿತರಿಗೆ ದೇವಾಲಯಗಳಲ್ಲಿ ಪ್ರವೇಶ ಮತ್ತು ಕುಡಿಯುವ ನೀರಿನ ಬಾವಿಯನ್ನು ಬಳಸುವಲ್ಲಿ ಎಲ್ಲರಿಗಿರುವಂತೆಯೇ ದಲಿತ–ರಿಗೂ ಮುಕ್ತ ಅವಕಾಶವಿರಬೇಕು ಎಂದು ಒತ್ತಾಯಿಸಿದರು. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ, ದಲಿತರ ಹಕ್ಕುಗಳಿಗಾಗಿ ಸೆಣಸಾಟ, ಸಮಾಜ ಸುಧಾರಣೆಗಾಗಿ ಚಿಂತನೆ, ಮನುಷ್ಯರ ಸಮಾನತೆ ಮತ್ತು ಘನತೆಗಾಗಿನ ನಿರಂತರ ಸಮರ ರಾಮ್ ಅವರ ಬದುಕಿನ ಸೂತ್ರಗಳಾದವು. 1946 ರಲ್ಲಿ ಪ್ರಥ–ಮ ಹಂಗಾಮಿ ಸರ್ಕಾರ ರಚನೆಯಾದಾಗ ಸಂಪುಟದ ಅತ್ಯಂತ ಕಿರಿಯ ಸಚಿವರಾಗಿ ರಾಮ್ ಅವರಿಗೆ ಸಂಪುಟದಲ್ಲಿ ಕಾರ್ಮಿಕ ಖಾತೆ ಮುಂದಾಳತ್ವ ಸಂದಿತು. ಮುಂದೆ ರಾಮ್ ತಮ್ಮ ರಾಜಕೀಯ ಪಯಣದಲ್ಲಿ ಹಿಂದಿರುಗಿ ನೋಡಿದ್ದೇ ಇಲ್ಲ. ಹಲವಾರು ಖಾತೆಗಳ ಸಚಿವ ಸ್ಥಾನಗಳನ್ನು ನಿರ್ವಹಿಸಿದರು.

1971ರಲ್ಲಿ ಭಾರತ–ಪಾಕ್ ಮಧ್ಯೆ ಯುದ್ಧ ನಡೆದಾಗ (ಬಾಂಗ್ಲಾ ಪ್ರತ್ಯೇಕ ರಾಷ್ಟ್ರವಾಗಿ ಉದಯವಾದದ್ದು ಈ ಯುದ್ಧದ ಫಲಶ್ರುತಿ) ಜಗಜೀವನ್ ರಾಮ್ ಕೇಂದ್ರ ಸಂಪುಟದಲ್ಲಿ ರಕ್ಷಣಾ ಸಚಿವರಾಗಿದ್ದರು. ಎರಡು ಅವಧಿಗೆ ರಾಮ್ ಕೇಂದ್ರ ಸಂಪುಟದಲ್ಲಿ ಕೃಷಿ ಸಚಿವರಾಗಿದ್ದರು. ಭಾರತೀಯ ಕೃಷಿ ಆಧ–ುನೀಕರಣಗೊಂಡದ್ದು ಮತ್ತು ಭಾರತದಲ್ಲಿ ಹಸಿರು ಕ್ರಾಂತಿಯಾದದ್ದು ರಾಮ್ ಅವರು ಕೃಷಿ ಸಚಿವರಾಗಿದ್ದ ಈ ಅವಧಿಯಲ್ಲಿ. 1974 ರಲ್ಲಿ ದೇಶ ಬರಗಾಲವನ್ನು ಎದು–ರಿಸಿದಾಗ ಆಹಾರದ ಬಿಕ್ಕಟ್ಟನ್ನು ನಿಭಾಯಿಸುವ ಹೊಣೆಯನ್ನು ಹೊತ್ತವರು ರಾಮ್. ತಮ್ಮ ಖಾತೆಯ ಜೊತೆಗೆ ರಾಮ್ ಅವರು ಆಹಾರ ಖಾತೆಯನ್ನು ಹೆಚ್ಚಿನ ಖಾತೆಯಾಗಿ ನಿಭಾಯಿಸಿದರು. ಕ್ರಮೇಣದಲ್ಲಿ ಬಾಬು ಜಗಜೀವನ ರಾಮ್ ಎಂದೇ ಪ್ರಸಿದ್ಧರಾದರು.

ಇಂದಿರಾ ಗಾಂಧಿ 1975 ರಲ್ಲಿ ದೇಶದಲ್ಲಿ ತುರ್ತುಸ್ಥಿತಿ ಘೋಷಿಸಿದಾಗ, ಅದನ್ನು ಅವರು ಬೆಂಬಲಿಸಿದರು. ರಾಮ್ ರಾಜ–ಕೀಯ ಮುತ್ಸದ್ದಿಯಾಗಿ, ರಾಜಕೀಯವನ್ನು ಬಲ್ಲ, ಅದರೆಲ್ಲ ಒಳಸುಳಿಗಳನ್ನು ತಿಳಿದ ತಂತ್ರಗಾರರಾಗಿದ್ದರು. ಒಮ್ಮೆ ಅವರು ತುರ್ತು ಪರಿಸ್ಥಿತಿ ಸಮಯದಲ್ಲಿ "ತಮ್ಮ ನೆರಳೂ ತಮಗೆ ಸಂಶಯದ ದಿಗಿಲು ತರುತ್ತಿತ್ತು" ಎಂದು ಹೇಳಿದ್ದರು. 1977 ರಲ್ಲಿ ಜಯಪ್ರಕಾಶ್ ನಾರಾಯಣ್ ಅವರ ಜೊತೆ ಕೈಜೋಡಿಸಿ ಜನತಾ ಪಕ್ಷದ ಮೈತ್ರಿಕೂಟವನ್ನು ಸೇರಿಕೊಂಡರು. ಉತ್ತರ ಭಾರತದಲ್ಲಿ ಜನತಾ ಪಕ್ಷದ ಮೈತ್ರಿಕೂಟ ಸಾಧಿಸಿದ್ದ ಗೆಲುವಿನಲ್ಲಿ ಬಾಬು ಜಗಜೀವನ್ ರಾಮ್ ಅವರ ಪ್ರಭಾವ ಮಹತ್ವದ್ದಾಗಿತ್ತು. ಪ್ರಧಾನಿ ಹುದ್ದೆಗೆ ಕೇಳಿಬಂದರಾದರೂ ಉಪ ಪ್ರಧಾನಿ ಪಟ್ಟಕ್ಕೆ ಸೀಮಿತರಾಗಬೇಕಾಯಿತು. ಬಾಬು ಜಗಜೀವನ್ ರಾಮ್ ಅವರು 1986 ವರ್ಷದ ಜುಲೈ 6 ರಂದು ನಿಧನರಾದರು.

–ಎನ್.ಎನ್.ಕಬ್ಬೂರ
ಶಿಕ್ಷಕರು ತಾ–ಸವದತ್ತಿ
ಜಿ–ಬೆಳಗಾವಿ

# ಮಹಿಳೆಯರಿಗೆ, ರೈತರಿಗೆ ಕಾಂಗ್ರೆಸ್ ಕೊಡುಗೆ ಅಪಾರ: ಕಾಂಗ್ರೆಸ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

## ಗುಂಜೇನಟ್ಟಿ, ದೇವಗಿರಿ, ಕಡೋಲಿ ಗ್ರಾಮದಲ್ಲಿ ಬೂತ್ ಮಟ್ಟದ ಕಾಂಗ್ರೆಸ್ ಕಾರ್ಯಕರ್ತರ ಸಭೆ

ಬೆಳಗಾವಿ: ಮಹಿಳೆಯರಿಗೆ, ರೈತ-ರಿಗೆ, ಕಾರ್ಮಿಕರಿಗೆ ವಿದ್ಯಾರ್ಥಿಗಳಿಗೆ ಕಾಂಗ್ರೆಸ್ ಕೊಡುಗೆ ಅಪಾರವಾಗಿದೆ. ದೃಢ ನಿರ್ಧಾರದಿಂದ ಮತದಾರರು ಕಾಂಗ್ರೆಸ್ ಬೆಂಬಲ ನೀಡಬೇಕು ಎಂದು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಮನವಿ ಮಾಡಿಕೊಂಡರು.

ಚಿಕ್ಕೋಡಿ ಲೋಕಸಭೆ ಚುನಾವಣೆಯ ಹಿನ್ನೆಲೆಯಲ್ಲಿ ಬೆಳಗಾವಿ ತಾಲೂಕಿನ ಗುಂಜೇನಟ್ಟಿ, ದೇವಗಿರಿ, ಕಡೋಲಿ ಗ್ರಾಮದಲ್ಲಿ ಬೂತ ಮಟ್ಟದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕಾಶ್ಮೀರದಿಂದ -ಕನ್ಯಾಕುಮಾರಿವರೆಗೂ ದೇಶದ ಉದ್ದಗಲಕ್ಕೂ ಕಾಂಗ್ರೆಸ್ ಶ್ರಮಿಸಿದೆ. ದೇಶದ ಹಿತರಕ್ಷಣೆಗಾಗಿ ಸೈನಿಕರನ್ನು ಬಲಾಢ್ಯಗೊಳಿಸುರುವುದು ಕಾಂಗ್ರೆಸ್. ದೇಶದ ಭದ್ರತೆ ಅವಶ್ಯಕತೆ ಇದೆ. ಹೀಗಾಗಿ ಯುವಕರು, ತಾಯಂದಿರು ಕಾಂಗ್ರೆಸ್ ಗೆ ಬೆಂಬಲ ನೀಡಬೇಕು. ತವರು ಕ್ಷೇತ್ರವಾದ ಯಮಕನಮರಡಿ ಕ್ಷೇತ್ರದದ ಬಹಳಷ್ಟು ನೀರಿಕ್ಷೆ ಇದೆ. ಮತದಾರರು ಒಗ್ಗಟ್ಟಾಗಿ ಈ ಕ್ಷೇತ್ರದಿಂದ ಉತ್ತಮ ಲೀಡ್ ಕೊಡಬೇಕು ಎಂದು ಹೇಳಿದರು.

ಅಮೂಲ್ಯವಾದ ಮತ "ಕೈ" ಗೆ ನೀಡಿ: ದೇಶದ ಅಭಿವೃದ್ಧಿಗಾಗಿ ಮತದಾರರು ಕಾಂಗ್ರೆಸ್ ಗೆ ಬೆಂಬಲ ನೀಡುವ ಮೂಲಕ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ನಿಮ್ಮ ಸಹೋದ-ರಿಗೆ ಮತದಾರರು ತಮ್ಮ ಅಮೂಲ್ಯವಾದ ನೀಡಬೇಕು ಎಂದು ಪ್ರಿಯಂಕಾ ಜಾರಕಿಹೊಳಿ ಅವರು ಮನವಿ ಮಾಡಿಕೊಂಡರು.

ನಿಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕು. ನಿಮ್ಮ ಮನೆ-ಮಗಳನ್ನು ಕೈ ಹಿಡಿದು ನಡೆಸುವ ಜವಾಬ್ದಾರಿ ನಿಮ್ಮ ಮೇಲಿದೆ. ಈ ಕ್ಷೇತ್ರದಿಂದ ಆಯ್ಕೆಯಾದರೆ,



ಹಗಲಿರುಳು ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು. ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಅಭಿವೃದ್ಧಿ ಕನಸುಗಳನ್ನು ಇಟ್ಟುಕೊಳ್ಳಲಾಗಿದೆ. ಮತದಾರರು ಆಶೀರ್ವದಿಸಿ ಲೋಕಸಭೆಗೆ ಕಳಿಸಿಕೊಡಬೇಕು ಎಂದು ಹೇಳಿದರು.

ದೇವಗಿರಿಯಲ್ಲಿ ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮಾತನಾಡಿ, ಐದು ಗ್ಯಾರಂಟಿ ಯೋಜನೆಗಳನ್ನು ರಾಜ್ಯ ಸರ್ಕಾರ ಅನುಷ್ಠಾನಗೊಳಿಸಿದ್ದಾರೆ. ಈ ಯೋಜನೆಗಳಿಂದ ರಾಜ್ಯದ ಜನತೆ ನೆಮ್ಮದಿ ಜೀವನ ಸಾಗಿಸುತ್ತಿದ್ದಾರೆ. ಕಾಂಗ್ರೆಸ್ ಹೈಕಮಾಂಡ ಕೂಡ ಚುನಾವಣೆ ಪೂರ್ವ ಪ್ರಣಾಳಿಕೆ ಬಿಡುಗಡೆ ಮಾಡಲಾಗಿದೆ. ಲೋಕಸಮರದಲ್ಲಿ ಕೈ ಅಧಿಕಾರಿಕ್ಕೆ ಬಂದರೆ 30 ಲಕ್ಷ ಯುವಕರಿಗೆ ಉದ್ಯೋಗ ನೀಡಲಾಗುವುದು, ಮಹಿಳೆರಿಗಾಗಿ ಮೀಸಲಾತಿ ಸೇರಿದಂತೆ ಪ್ರತಿವರ್ಷವೂ ಮದ್ಯದ ವರ್ಗದ ಕುಟುಂಬಕ್ಕೆ 1 ಲಕ್ಷ ರೂ. ನೀಡುವುದಾಗಿ ಭರವಸೆ ನೀಡಿದೆ. ಕಾಂಗ್ರೆಸ್ ಭರವಸೆ ಯಾವತ್ತು ಸುಳ್ಳಾಗುವುದಿಲ್ಲ, ಪ್ರಣಾಳಿಕೆಯಲ್ಲಿ ನೀಡಿರುವ ಅಜೆಂಡಾ ವನ್ನು ಈಡೇ-ರಿಸಲಾಗುವುದು ಎಂದು ಪ್ರಿಯಾಂಕಾ ಭರ್ಜರಿ ಮತಬೇಟೆ ನಡೆಸಿದರು.

ಕೆಪಿಸಿಸಿ ಸದಸ್ಯ ಮಲಗೌಡ ಪಾಟೀಲ್ ಮಾತನಾಡಿ, ಎಲ್ಲರೂ ಸಮಾನತೆಯೆಯಿಂದ ಬಾಳಬೇಕು ಎನ್ನುವುದು ಸಿಎಂ ಸಿದ್ದರಾಮಯ್ಯನವರ ಆಶಯ. ಐದು ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ರಾಜ್ಯದ ಹಿತ ಕಾಪಾಡುತ್ತಿರುವ ಅಪರೂಪ ನಾಯಕ ಸಿದ್ದರಾಮಯ್ಯ ಅವರು, ಅವರ ಶಕ್ತಿಯನ್ನು ನಾವು ಬಲಪಡಿಸಬೇಕು. ಅವರ ಶಕ್ತಿ ದೇಶದ ಜನತೆಗೆ ತಿಳಿಯಬೇಕೆಂದರೆ ಅತೀ ಹೆಚ್ಚು ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಬೇಕು. ಎಲ್ಲಾ ಸಮುದಾಯದ ಹಿತ ಬಯಸುವ ಸಿಎಂ ಸಿದ್ದರಾಮಯ್ಯನರು ಗ್ಯಾರಂಟಿ ಯೋಜನೆ ಜಾರಿಗೆ ತಂದು ಯಶಸ್ಸು ಕಂಡಿದ್ದಾರೆ. ಸಿಎಂ ಸಿದ್ದರಾಮಯ್ಯನವರ ಆಡಳಿತ ವೈಕರಿಗೆ ದೇಶದ ಜನತೆ ನಿಬ್ಬೆರಗಾಗಿದ್ದಾರೆ ಎಂದು ಹೇಳಿದರು.

ಸಿಎಂ ಸಿದ್ದರಾಮಯ್ಯನವರು, ಮಳೆ, ಬೆಳೆ ಇಲ್ಲದ ಸಮಯದಲ್ಲಿ ರಾಜ್ಯದ ಜನತೆಯ ಕೈ ಹಿಡಿದವರು, ಸಿದ್ದರಾಮಯ್ಯನವರು ಸರ್ಕಾರದ ಆರ್ಥಿಕ ಸುಧಾರಣೆಗೆ ಹಗಲಿರುಳು ಶ್ರಮಿಸಿದ್ದಾರೆ. ಅವರ ಋಣಭಾರದ ನಮ್ಮ ಮೇಲಿದೆ ಹೀಗಾಗಿ ಮತದಾರರ ಕಾಂಗ್ರೆಸ್ ಮತ ನೀಡಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸಬೇಕು ಎಂದು ಹೇಳಿದರು.

ಮಾಜಿ ಜಿಪಂ ಅಧ್ಯಕ್ಷ ಅರುಣ ಕಂಟಾಬಳೆ, ಅನು ಕಟಾಂಬಳೆ, ಬಸವಣ್ಣ ಮಾಯಾನಾಚೆ, ಶಿವಾಜಿ ಕುಟ್ರೆ, ಮೋಹನ ಪಾಟೀಲ್, ಉಪಾಧ್ಯಕ್ಷ ದೀಪಾ ಮರಗಾಳೆ, ರಾಜು ಮಾಯಣ್ಣಾ, ಕೃಷ್ಣಬಾಯಿ ಬಂಡಾರಿ ಹಾಗೂಇತರರು ಇದ್ದರು.


# ಮನೆ ಮಗನಾಗಿ ಮೃಣಾಲ್ ಕೆಲಸ ಮಾಡಲಿದ್ದಾನೆ; ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ಬೆಳಗಾವಿ: 25 ವರ್ಷಗಳ ಹಿಂದೆ ಕಾಂಗ್ರೆಸ್ ಪಕ್ಷದಲ್ಲಿ ಸಾಮಾನ್ಯ ಕಾರ್ಯಕರ್ತೆಯಾಗಿ ರಾಜಕೀಯ ಜೀವನ ಆರಂಭಿಸಿದ ನಾನು, ಇಂದು ಏಳು ಕೋಟಿ ಜನಸಂಖ್ಯೆಯ ಕರ್ನಾಟಕದ ಏಕೈಕ ಮಹಿಳಾ ಮಂತ್ರಿಯಾಗಿರುವೆ. ಸಾಮಾನ್ಯ ಕಾರ್ಯಕರ್ತರಿಗೆ ಕಾಂಗ್ರೆಸ್ ಪಕ್ಷದಲ್ಲಿ ತೋರುವ ಮಹತ್ವ ಇದಾಗಿದೆ. ಸ್ಥಳೀಯ ಅಭ್ಯರ್ಥಿ, ನಿಮ್ಮ ಮನೆ ಮಗ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಬೆಂಬಲಿಸಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಅರಭಾವಿ ವಿಧಾನಸಭಾ ಕ್ಷೇತ್ರದ ಮೆಳವಂಕಿ ಹಾಗೂ ಕೌಜಲಗಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಶುಕ್ರವಾರ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಸಚಿವರು, ಕಾಂಗ್ರೆಸ್ ಕಾರ್ಯಕರ್ತರು ಈ ಬಾರಿ ಮೈಮರೆಯದೆ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

**ಬಿಜೆಪಿ ಕೊಡುಗೆ ಶೂನ್ಯ:**

ಕಳೆದ 20 ವರ್ಷಗಳಿಂದ ಬೆಳಗಾವಿ ಕ್ಷೇತ್ರದಲ್ಲಿ ಬಿಜೆಪಿ ಸಂಸದರಿದ್ದರೂ ಕ್ಷೇತ್ರಕ್ಕೆ



ಅವರ ಕೊಡುಗೆ ಶೂನ್ಯ. ಸ್ಥಳೀಯ ಸಮಸ್ಯೆಗಳಿಗೆ ಪರಿಹಾರ ನೀಡದೆ, ಜನ-ರಿಂದ ದೂರ ಉಳಿದರು.

ಮೋದಿ ಹೆಸರಿನಲ್ಲಿ ಎರಡು ಬಾರಿ ಗೆದ್ದಿದ್ದೆ ಅವರ ಸಾಧನೆ ಎಂದು ಸಚಿವರು ಟೀಕಿಸಿದರು. ಈಗಿನ ಬಿಜೆಪಿ ಅಭ್ಯರ್ಥಿ ಈ ಹಿಂದೆ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ, ಜಿಲ್ಲೆಯ ಅಭಿವೃದ್ಧಿ ಬಗ್ಗೆ ನಿರ್ಲಕ್ಷ್ಯ ವಹಿಸಿದ್ದರು.

ಹಾಗಾಗಿ ಸ್ಥಳೀಯ ಅಭ್ಯರ್ಥಿಗೆ ಮತ ನೀಡಿ ಎಂದರು.

ಸ್ಥಳೀಯ ಸಮಸ್ಯೆಗಳನ್ನು ಸರಿಯಾಗಿ ಅರಿತಿರುವ ಮೃಣಾಲ್ ಹೆಬ್ಬಾಳ್ಕರ್, ನಿಮ್ಮ ಧ್ವನಿಯಾಗಿ ದೆಹಲಿಯಲ್ಲಿ ಕೆಲಸ ಮಾಡಲಿದ್ದಾನೆ. ಇನ್ನೂ ಯುವಕನಿದ್ದಾನೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾರ್ಗದರ್ಶನದಂತೆ ಬೆಳಗಾವಿ ಕ್ಷೇತ್ರಕ್ಕೆ ಮೃಣಾಲ್ ಹೆಬ್ಬಾಳ್ಕರ್, ಚಿಕ್ಕೋಡಿ ಕ್ಷೇತ್ರಕ್ಕೆ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಕಣಕ್ಕಿಳಿಸಲಾಗುತ್ತಿದೆ. ಬೆಳಗಾವಿ ಜಿಲ್ಲೆಯ ಎರಡು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಅಭ್ಯರ್ಥಿಗಳು ಜಯಭೇರಿ ಬಾರಿಸುವಂತಾಗಬೇಕು ಎಂದರು.

**ಸ್ಥಳೀಯ ಸಮಸ್ಯೆಗಳ ಅರಿವಿದೆ: ಮೃಣಾಲ್**

ತಾಯಿ ಲಕ್ಷ್ಮೀ ಹೆಬ್ಬಾಳ್ಕರ್, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರ ಮಾರ್ಗದರ್ಶನದಲ್ಲಿ ಸ್ಪರ್ಧಿಸುತ್ತಿದ್ದು, ಈ ಬಾರಿ ಕಾಂಗ್ರೆಸ್ ಗೆಲುವಿಗೆ ಎಲ್ಲರೂ ಸಹಕರಿಸಬೇಕು ಎಂದು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಮನವಿ ಮಾಡಿದರು. ಕಳೆದ 20 ವರ್ಷಗಳಿಂದ ಬಿಜೆಪಿ ಸಂಸದ-ರಿದ್ದರೂ ಜಿಲ್ಲೆಯ ಎಷ್ಟೋ ಗ್ರಾಮಗಳಿಗೆ ಅವರು ಭೇಟಿಯನ್ನೇ ಕೊಟ್ಟಿರಲಿಲ್ಲ. ಒಂದೇ ಒಂದು ಕೈಗಾರಿಕೆಗಳನ್ನು ಸ್ಥಾಪಿಸಿಲ್ಲ. ಇದರಿಂದ ನಮ್ಮ ಜಿಲ್ಲೆಯ ಯುವಕರು ಬೆಂಗಳೂರು, ಪುಣೆ ಕಡೆಗೆ ವಲಸೆ ಹೋಗುವಂತಾಗಿದೆ ಎಂದರು.

**ತೆರೆದ ವಾಹನದಲ್ಲಿ ಮೆರವಣಿಗೆ:**

ಕೌಜಲಗಿಯಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವರಿಗೆ ಸ್ಥಳೀಯ ಕಾರ್ಯಕರ್ತರು ಅದ್ದೂರಿ ಸ್ವಾಗತ ನೀಡಿದರು. ಬಳಿಕ ತೆರೆದ ವಾಹನದಲ್ಲಿ ಸಚಿವರು, ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಮೆರವಣಿಗೆ ಮೂಲಕ ಕಾರ್ಯಕ್ರಮ ನಡೆದ ಸ್ಥಳದವರೆಗೂ ಮೆರವಣಿಗೆ ಮೂಲಕ ಕರೆ ತರಲಾಯಿತು. ಇದೇ ವೇಳೆ ಅನ್ಯ ಪಕ್ಷಗಳ ಹಲವು ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆಗೊಂಡರು.

# ಬಾಬು ಜಗಜೀವನರಾಮ್ ತತ್ವಾದರ್ಶ ಅನುಕರಣೀಯ: ಸಿದ್ಧಬಸವ ಶ್ರೀ ಅಭಿಮತ



ಹುಕ್ಕೇರಿ: ಸಾಮಾಜಿಕ ನ್ಯಾಯದ ಹೋರಾಟಗಾರ ಬಾಬು ಜಗಜೀವನರಾಮ್ ದೇಶಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ತತ್ವ ಸಿದ್ಧಾಂತಗಳು ಅನುಕರಣೀಯವಾಗಿದ್ದು ಅವುಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳುವ ಅಗತ್ಯವಿದೆ ಎಂದು ಹುಣಸಿಕೊಳ್ಳಮಠದ ಉತ್ತರಾಧಿಕಾರಿ ಸಿದ್ಧಬಸವ ಸ್ವಾಮೀಜಿ ಅಭಿಪ್ರಾಯಪಟ್ಟರು.

ಪಟ್ಟಣದಲ್ಲಿ ಶುಕ್ರವಾರ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಪುರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಏರ್ಪಡಿಸಿದ ಹಸಿರುಕ್ರಾಂತಿ ಹರಿಕಾರ, ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನರಾಮ್ ಅವರ 117ನೇ ಜಯಂತಿ ಉತ್ಸವದಲ್ಲಿ ಮಾತನಾಡಿದ ಅವರು, ಜಗಜೀವನರಾಮ್ ಅತ್ಯುತ್ತಮ ಸಂಸದೀಯ ಪಟು ಆಗಿದ್ದಲ್ಲದೇ ನಿಜವಾದ ಪ್ರಜಾಪ್ರಭುತ್ವವಾದಿಯಾಗಿದ್ದರು. ರೈತಪರ ಅನನ್ಯ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಹಸಿರುಕ್ರಾಂತಿ ಹರಿಕಾರ ಎಂಬ ಹಿರಿಮೆಗೆ ಪಾತ್ರವಾಗಿದ್ದರು ಎಂದರು.

ತಹಸೀಲದಾರ ಬಲರಾಮ ಕಟ್ಟಿವಳುನಿ ಅಧ್ಯಕ್ಷತೆ ವಹಿಸಿದ್ದರು. ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಸಹಾಯಕ ಪ್ರಾಧ್ಯಾಪಕ ಡಾ.ಪ್ರಕಾಶ ಕಟ್ಟಿಮನಿ ಉಪನ್ಯಾಸ ನೀಡಿದರು. ಕಳೆದ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಅತ್ಯುತ್ತಮ ಅಂಕಗಳಿಸಿದ ವಿದ್ಯಾರ್ಥಿಗಳನ್ನು ಇದೇ ವೇಳೆ ಸನ್ಮಾನಿಸಲಾಯಿತು.

ತಾಪಂ ಇಒ ಟಿ.ಆರ್.ಮಲ್ಲಾಡದ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಎಚ್.ಎ.ಮಾಹುತ, ಸಿಪಿಐಗಳಾದ ಸಿಪಿಐ ಜಯಂತ ಗೌಳಿ, ಎಸ್.ಎಂ.ಅವಜಿ, ಬಿಇಒ ಪ್ರಭಾವತಿ ಪಾಟೀಲ, ಸಿಡಿಪಿಒ ಎಚ್.ಹೊಳೆಪ್ಪ, ಮುಖಂಡರಾದ ಉದಯ ಹುಕ್ಕೇರಿ, ಕರೆಪ್ಪಾ ಗುಡೆನ್ನವರ, ಕೆಂಪಣ್ಣಾ ಶಿರಹಟ್ಟಿ, ರವಿ ಸನದಿ, ಶಂಕರ ಕಟ್ಟಿಮನಿ, ಪಿಂಟು ಹೊನ್ನೊಳ್ಳಿ, ಬಾಹುಸಾಹೇಬ ಪಾಂಡ್ರೆ, ಸಮಾಜ ಕಲ್ಯಾಣ ಇಲಾಖೆಯ ನಿಲಯಪಾಲಕರಾದ ಎಲ್.ಬಿ.ಮಾಲದಾರ, ಮಹಾನಂದಾ ಕೋಟಬಾಗಿ, ಎಸ್.ವಿ.ಪೂಜೇರಿ, ಸಂತೋಷ ಮಾಲಗತ್ತಿಮಠ ಮತ್ತಿತರರು ಉಪಸ್ಥಿತರಿದ್ದರು.

ಅಂಬೇಡ್ಕರ ನಗರದ ಅಡವಿಸಿದ್ದೇಶ್ವರ ಮಠದಿಂದ ಹಳೆ-ಹೊಸ ಬಸ್ ನಿಲ್ದಾಣ, ಕೋರ್ಟ್ ಸರ್ಕಲ್, ಘಟಪ್ರಭಾ ರಸ್ತೆ ಮೂಲಕ ಸಮಾರಂಭದ ಸ್ಥಳದವರೆಗೆ ಬಾಬು ಜಗಜೀವನರಾಮ್ ಅವರ ಭಾವಚಿತ್ರ ಮೆರವಣಿಗೆ ನಡೆಯಿತು. ಚನ್ನಬಸಪ್ಪಾ ಚೌಗಲಾ ನಿರೂಪಿಸಿದರು.

# ಸಚಿವ ಸತೀಶ ಜಾರಕಿಹೊಳಿಗೆ ಸಿಎಂ ಯೋಗ: ಯರನಾಳ ಬ್ರಹ್ಮಾನಂದ ಶ್ರೀ



ಹುಕ್ಕೇರಿ: ಮೂರು ದಶಕಕ್ಕೂ ಹೆಚ್ಚು ಕಾಲ ರಾಜ-ಕೀಯದೊಂದಿಗೆ ಜನಸೇವೆಯಲ್ಲಿ ತೊಡಗಿರುವ ಮುತ್ಸದ್ಧಿ ರಾಜಕಾರಣಿ ಸಚಿವ ಸತೀಶ ಜಾರಕಿಹೊಳಿ ಅವರು ಮುಂದಿನ ಬಾರಿ ರಾಜ್ಯದ ಮುಖ್ಯಮಂತ್ರಿಯಾಗುವ ಯೋಗ ಒಲಿದು ಬರಲಿದೆ ಎಂದು ಯರನಾಳ ಬ್ರಹ್ಮಾನಂದ ಸ್ವಾಮೀಜಿ ಭವಿಷ್ಯ ನುಡಿದರು.

ತಾಲೂಕಿನ ಯರನಾಳ ಗ್ರಾಮದಲ್ಲಿ ನಡೆದ ಜಿಲ್ಲಾ ಮಟ್ಟದ ತ್ರೈಮಾಸಿಕ ಪರಿಶೀಲನಾ (ಕೆಡಿಪಿ) ಸಮಿತಿ ನೂತನ ಸದಸ್ಯ, ಸಚಿವ ಜಾರಕಿಹೊಳಿ ಆಪ್ತ ಅನುಯಾಯಿ ಬಸವರಾಜ ಕೋಳಿ ಅವರ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಎಲ್ಲ ಸಮುದಾಯಗಳ ಶ್ರೇಯೋಭಿವೃದ್ಧಿ ಶ್ರಮಿಸುತ್ತಿರುವ ಮಿತ ಭಾಷಿ ಸತೀಶ ಸಿಎಂ ಆಗುವ ಎಲ್ಲಾ ಅರ್ಹತೆ ಹೊಂದಿದ್ದಾರೆ ಎಂದರು.

ರಾಜಕೀಯ ಸೇವೆ ಜೊತೆಗೆ ಶೈಕ್ಷಣಿಕ, ಕ್ರೀಡೆ, ಸಾಂಸ್ಕೃತಿಕ, ಔದ್ಯೋಗಿಕ ಕ್ಷೇತ್ರಕ್ಕೂ ಸತೀಶ ಜಾರಕಿಹೊಳಿ ಅನನ್ಯ ಕೊಡುಗೆ ನೀಡಿದ್ದಾರೆ. ಜಿಲ್ಲೆ ಸೇರಿದಂತೆ ರಾಜ್ಯದ ಸರ್ವ ಸಮುದಾಯಗಳನ್ನು ಸಮಾನವಾಗಿ ಕಾಣುತ್ತಿದ್ದು ನೆಚ್ಚಿನ ನಾಯಕರಾಗಿ ಹೊರಹೊಮ್ಮಿದ್ದಾರೆ. ದಲಿತ ಸಮಾಜಕ್ಕೆ ಸಿಎಂ ನೀಡಬೇಕೆನ್ನುವ ಕೂಗು ಕೇಳಿ ಬರುತ್ತಿದ್ದು ಮುಂದಿನ ಬಾರಿ ಸತೀಶ ಜಾರಕಿಹೊಳಿ ಸಿಎಂ ಸ್ಥಾನ ಒಲಿದು ಬರಲಿದೆ ಎಂದು ಅವರು ಹೇಳಿದರು.

ಇನ್ನು ಕೆಡಿಪಿ ಸಮಿತಿಗೆ ಸದಸ್ಯರಾಗಿ ನೇಮಕಗೊಂಡಿರುವ ಬಸವರಾಜ ಕೋಳಿ ಅವರು ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ವಿಶ್ವಾಸವಿದೆ. ಈ ಮೂಲಕ ಜಿಲ್ಲೆಯ ಎಸ್ಸಿ-ಎಸ್ಟಿ ಜನರ ಏಳಿಗೆಗೆ ಸೇವೆ ಸಲ್ಲಿಸುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಬೇಕು. ಈ ಹಿಂದೆಯೂ ಬಸವರಾಜ ಕೋಳಿ ಜಿಲ್ಲಾ ಮಟ್ಟದ ಎಸ್ಸಿಎಸ್ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯರಾಗಿಯೂ ಸಾಕಷ್ಟು ಕೆಲಸ ಮಾಡಿದ್ದಾರೆ ಎಂದರು.

ಸಚಿವರ ಆಪ್ತ ಸಹಾಯಕ ಪಾಂಡು ಮನ್ನಿಕೇರಿ, ಮುಖಂಡರಾದ ಮುಕುಂದ ಮಠದ, ವೃಷಭ ಪಾಟೀಲ, ಸಂತೋಷ ಮುಡಸಿ, ಸುರೇಶ ಹುಣಶ್ಯಾಳಿ, ದಿಲೀಪ ಹೊಸಮನಿ, ಗೋಪಾಲ ಮಠದ, ಶಾನೂಲ್ ತಹಸಿಲ್ದಾರ್, ಅವಿನಾಶ್ ನಲವಡೆ, ತಬರೇಜ್ ಮತ್ತಿತರರು ಉಪಸ್ಥಿತರಿದ್ದರು.

# ಯುಗಾದಿ ಹಬ್ಬಕ್ಕೆ ಕೆಎಸ್‌ಆರ್‌ಟಿಸಿಯಿಂದ 2000ಕ್ಕೂ ಹೆಚ್ಚುವರಿ ಬಸ್ ವ್ಯವಸ್ಥೆ



ಬೆಂಗಳೂರು: ಯುಗಾದಿ ಹಬ್ಬದ ಪ್ರಯುಕ್ತ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವಿವಿಧ ಊರುಗಳಿಗೆ 2000ಕ್ಕೂ ಹೆಚ್ಚು ವಿಶೇಷ ಬಸ್ಗಳ ವ್ಯವಸ್ಥೆ ಮಾಡಿದೆ. ಯುಗಾದಿ ಹಬ್ಬ ಹಾಗೂ ಸಾಲು ರಜೆಗಳ ಕಾರಣ ಊರಿಗೆ ತೆರಳುವವರಿಗೆ ಹಾಗೂ ಪ್ರವಾಸ ತೆರಳುವವರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಕೆಎಸ್‌ಆರ್ಟಿಸಿ ಈ ಕ್ರಮಕ್ಕೆ ಮುಂದಾಗಿದೆ. ಕೆಎಸ್‌ಆರ್ಟಿಸಿ ಸೇರಿ ನಾಲ್ಕು ನಿಗಮಗಳು ವಿಶೇಷ ಬಸ್‌ಗಳು ಕಾರ್ಯಾಚರಣೆಗೆ ಸಜ್ಜಾಗಿವೆ.

ಏಪ್ರಿಲ್ 9ರಂದು ಮಂಗಳವಾರ ಯುಗಾದಿ ಹಬ್ಬ ಇರಲಿದೆ. ಶನಿವಾರ, ಭಾನುವಾರ ಹೇಗೂ ರಜೆಯಾದ್ದರಿಂದ ಸೋಮವಾರ ಒಂದು ದಿನ ರಜೆ ಮಾಡಿದರೆ 4 ದಿನ ರಜೆ ಸಿಕ್ಕಂತಾಗುತ್ತದೆ.

ಮುಂದಿನ ವಾರ, ಏಪ್ರಿಲ್ 11 ರ ಗುರುವಾರ ಮುಸ್ಲಿಮರ ಹಬ್ಬ ರಂಜಾನ್ ಸಹ ಇರಲಿದೆ. ಮತ್ತೆ ದೀರ್ಘ ವಾರಾಂತ್ಯ ರಜೆ ಸಿಗಲಿದೆ. 13 ರಂದು ಎರಡನೇ ಶನಿವಾರ ರಜೆ ಹಾಗೂ14 ರಂದು ಭಾನುವಾರ ರಜೆ ಇದೆ.

ಈ ಎಲ್ಲ ಕಾರಣಗಳನ್ನು ಮತ್ತು ಪ್ರಯಾಣಿಕರ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ಕೆಎಸ್‌ಆರ್ಟಿಸಿ ಹೆಚ್ಚುವರಿ ಬಸ್ ನಿಯೋಜನೆ ಮಾಡಿದೆ. ಕೆಎಸ್‌ಆರ್ಟಿಸಿಯಿಂದ 1,750ಬಸ್, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಿಂದ 145 ಬಸ್, ಕೆಕೆಆರ್ಟಿಸಿಯ 200 ಬಸ್ ಹಾಗೂ ಬಿಎಂಟಿಸಿಯ 180 ವಿಶೇಷ ಬಸ್‌ಗಳು ಸಂಚಾರ ಮಾಡಲಿವೆ.

ಒಟ್ಟು ನಾಲ್ಕು ನಿಗಮಗಳಿಂದ 2,275 ಹೆಚ್ಚುವರಿ ಬಸ್ ವ್ಯವಸ್ಥೆ ಮಾಡಲಾಗಿದೆ. ಹಬ್ಬಗಳು ಹಾಗೂ ವಾರಾಂತ್ಯದ ಕಾರಣ ಏಪ್ರಿಲ್ 7 ರಿಂದ ಏಪ್ರಿಲ್ 14ರ ವರೆಗೆ ಬರೋಬ್ಬರಿ 5 ರಜೆಗಳು ಸಿಗಲಿವೆ. ವಿದ್ಯಾರ್ಥಿಗಳಿಗೆ ಬೇಸಗೆ ರಜೆಯೂ ಶುರುವಾದ ಕಾರಣ ಮಕ್ಕಳ ಜೊತೆ ಪ್ರವಾಸಕ್ಕೆ ತೆರಳು ಪೋಷಕರು ಯೋಜನೆ ಹಾಕಿಕೊಂಡಿದ್ದಾರೆ. ಹೀಗಾಗಿ ಪ್ರಯಾಣಿಕರಿಗೆ ಅನುಕೂಲವಾಗುವಂತೆ ವಿಶೇಷ ಬಸ್ ಸೇವೆ ಒದಗಿಸಲಾಗುತ್ತಿದೆ.

# ಮೋಕಾ: 'ರೋಜಗಾರ್ ದಿವಸ್' ಆಚರಣೆ




ಬಳ್ಳಾರಿ: ತಾಲ್ಲೂಕಿನ ಮೋಕಾ ಗ್ರಾಮ ಪಂಚಾಯತಿಯಲ್ಲಿ ಶುಕ್ರವಾರದಂದು "ವಲಸೆ ಯಾಕ್ರಿ ನಿಮ್ಮೂರಲ್ಲೇ ಉದ್ಯೋಗ ಖಾತರಿ" ಅಭಿಯಾನದಡಿ "ರೋಜಗಾರ್ ದಿವಸ್" ಆಚ-ರಿಸಲಾಯಿತು.

ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೆಂಕಟಮ್ಮ ಅವರು ಮಾತನಾಡಿ, ರೋಜಗಾರ್ ದಿವಸದಲ್ಲಿ ನಮ್ಮ ಪಂಚಾಯತಿಯಲ್ಲಿ ಒಟ್ಟು 2452 ಉದ್ಯೋಗ ಚೀಟಿಗಳನ್ನು ವಿತರಣೆ ಮಾಡಲಾಗಿದೆ, ಅದರಲ್ಲಿ 1338 ಸಕ್ರಿಯ ಉದ್ಯೋಗ ಚೀಟಿಗಳಿದ್ದು, 2730 ಸಕ್ರಿಯವಾಗಿ ಕೂಲಿಕಾರ್ಮಿಕರು ನೋಂದಾಯಿಸಿಕೊಂಡು ಕೆಲಸಕ್ಕೆ ಬರುತ್ತಿದ್ದಾರೆ ಎಂದು ತಿಳಿಸಿದರು.

ಯಾವುದೇ ಕೂಲಿ ಕಾರ್ಮಿಕರು ಬೇರೆ ಕಡೆ ವಲಸೆ ಹೋಗಬಾರದು. ನಿಮ್ಮೂರಲ್ಲೇ ಕೂಲಿ ಕೆಲಸವನ್ನು ನೀಡಲಾಗುತ್ತಿದೆ, ಮುಂದಿನ 3 ತಿಂಗಳವರೆಗೆ ಕೆಲಸ ನೀಡಲು ಕಾಮಗಾರಿಗಳು ಲಭ್ಯವಿದೆ ಎಂದರು.


ಕೂಲಿಕಾರರು ನಮೂನೆ 6 ರಲ್ಲಿ ಮೇಟಿಗಳ ಮೂಲಕ ಅರ್ಜಿ ಸಲ್ಲಿಸಿದಲ್ಲಿ ಮುಂದಿನ ಒಂದು ಎರಡು ದಿನಗಳಲ್ಲಿ ನಿಮಗೆ ಕೂಲಿ ಕೆಲಸ ನೀಡಲಾಗುವುದು. ಬೇಸಿಗೆ ಅವಧಿಯಲ್ಲಿ ನಿಮಗೆ ಕಾಮಗಾರಿ ಕೆಲಸದ ಪ್ರಮಾಣದಲ್ಲಿ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಶೇ.30 ಮತ್ತು ಜೂನ್ ತಿಂಗಳಲ್ಲಿ ಶೇ.20 ರಿಯಾಯಿತಿ ನೀಡಲಾಗಿದೆ ಎಂದರು. ಎಲ್ಲಾ ಮೇಟಿಗಳು ಗ್ರಾಮ ಪಂಚಾಯಿತಿಗೆ ಬಂದು ನಮೂನೆ 6 ರಲ್ಲಿ ಕೂಲಿಕಾರರ ಬೇಡಿಕೆ ಸಲ್ಲಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮೋಕಾ ಗ್ರಾಪಂ ಕಾರ್ಯದರ್ಶಿ, ಬಿಎಫ್ಟಿ, ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಮೇಟಿಗಳು ಮತ್ತು ಊರಿನ ಕೂಲಿ ಕಾರ್ಮಿಕರು ಹಾಜರಿದ್ದರು.

# ಚಂದ್ರಶೇಖರ ಶ್ರೀಗಳಿಗೆ ವಿಶ್ವ ಬಸವಾಂಬೆ ಪ್ರಶಸ್ತಿ ಪ್ರಧಾನ

ಬೆಳಗಾವಿ: ಬೆಳಗಾವಿ ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಕೇಂದ್ರ ಹಾಗೂ ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಅಕ್ಷರ ದಾಸೋಹ ಯೋಜನೆಯಲ್ಲಿ ಚಿಕ್ಕೋಡಿ, ನಿಪ್ಪಾಣಿ , ಹುಕ್ಕೇರಿ ತಾಲೂಕಿನಲ್ಲಿ 65 ಸಾವಿರ ಮಕ್ಕಳಿಗೆ ಅಕ್ಷರ ದಾಸೋಹ ಯೋಜನೆಯನ್ನು ಯಶಸ್ವಿಗೊಳಿಸಿದ ಕೀರ್ತಿ ಶ್ರೀಗಳಿಗೆ ಸಲ್ಲುತ್ತದೆ. ಅನ್ನಪೂರ್ಣೇಶ್ವರಿ ಇವರಿಗೆ ಆರಾಧ್ಯ ದೇವತೆ. ಅನ್ನಪೂರ್ಣೇಶ್ವರಿಯ ಪುತ್ರನೇ ಎನ್ನಿಸಿರುವ ಚಂದ್ರಶೇಖರ ಶ್ರೀಗಳಿಗೆ ವಿಶ್ವ ಬಸವಾಂಬೆ ಪ್ರಶಸ್ತಿ ನೀಡಿ ಆಶೀರ್ವದಿಸುತ್ತಿರುವುದು ನಮಗೆ ಅತೀವ ಸಂತಸ ತಂದಿದೆ ಎಂದು ಶ್ರೀ ಕಾಶಿ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಕಲಬುರಗಿ ಜಿಲ್ಲೆಯ ಶಾಖಾಪುರ ವಿಶ್ವಾರಾಧ್ಯ ತಪೋವನದಿಂದ ಕೊಡಲ್ಪಡುವ ವಿಶ್ವ ಬಸವಾಂಬೆ ಪ್ರಶಸ್ತಿ ಪ್ರಧಾನ ಮಾಡಿ ಆಶೀರ್ವಚನ



ನೀಡಿದರು. ಅನ್ನಪೂರ್ಣೇಶ್ವರಿಯ ಪುತ್ರ ಬೆಳಗಾವಿ ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಕರ್ನಾಟಕ ರಾಜ್ಯ ಬಿಸಿಯೂಟ ಸ್ವಯಂ ಸೇವಾ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷರಾಗಿ ಕರ್ನಾಟಕದಲ್ಲಿ ಅಕ್ಷರ ದಾಸೋಹ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ಮಾರ್ಗದರ್ಶಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅಷ್ಟೆ ಅಲ್ಲದೆ, ಹುಕ್ಕೇರಿ ಸಾಕಷ್ಟು ಸಮಾಜ ಮುಖಿ ಕೆಲಸಗಳನ್ನು ಮಾಡಿದ್ದಾರೆ. ಇಡೀ ವಿಶ್ವವನ್ನೇ ಕಾಡಿದ್ದ ಮಹಾಮಾರಿ ಕೊರೊನಾ ಸಂಕಷ್ಟದಲ್ಲಿ ಗಡಿ ಭಾಗದ ಬೆಳಗಾವಿಯ ಜನರ ಅನುಕೂಲಕ್ಕಾಗಿ ಜಿಲ್ಲಾಡಳಿತಕ್ಕೆ ಉಚಿತವಾಗಿ ಆಂಬುಲೆನ್ಸ್ ನೀಡಿದ್ದು ಶ್ಲಾಘನೀಯ ಎಂದರು.

ಪ್ರಶಸ್ತಿ ಫಲಕ, ಶಾಲು ಮತ್ತು ಚಿನ್ನದ ಉಂಗುರವನ್ನು ನೀಡಿ ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರಿಗೆ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ವಿಶ್ವಾರಾಧ್ಯರ ಮತ್ತು ಬಸವಾಂಬೆಯವರ 73ನೇ ಜಾತ್ರಾ ಮಹೋತ್ಸವದ ಅಂಗವಾಗಿ ಸುಮಾರು 10 ಸಾವಿರ ಭಕ್ತರ ನಡುವೆ ಈ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಪ್ರಶಸ್ತಿಯನ್ನು ಶ್ರೀಮಠದಿಂದ ನೀಡಿದ ಶಾಖಾಪುರ ವಿಶ್ವಾರಾಧ್ಯ ತಪೋವನದ ಶ್ರೀ ಡಾ.ಸಿದ್ದರಾಮ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಹುಕ್ಕೇರಿ ಶ್ರೀಗಳು ದೇವಿಯ ಆರಾಧಕರು. ಲಿಂಗ ಪೂಜಾ ನಿಷ್ಠರು. ಇವತ್ತು ವಿಶ್ವಾರಾಧ್ಯರು ಎಂದರೆ ಈ ಭಾಗದಲ್ಲಿ ನಡೆದಾಡುವ ದೇವರು. ಅವರ ಆಜ್ಞೆಯಂತೆ ನಡೆದುಕೊಂಡವರೆ ಬಸವಾಂಬೆ ಅವರು. ಬಸವಾಂಬೆ ಎಂದರೆ ಈ ಭಾಗದಲ್ಲಿ ಅತೀ ಶ್ರದ್ದೆಯುಳ್ಳ ದೇವತೆ. ಇವರ ಹೆಸರಿನಿಂದ ಶ್ರೀಗಳಿಗೆ ಪ್ರಶಸ್ತಿ ನೀಡುತ್ತಿರುವುದು ನಮಗೆ ಅತೀವ ಸಂತೋಷ ತಂದಿದೆ ಎಂದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಬೆಳಗಾವಿ ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರು, ಇವತ್ತು ಅನೇಕ ಭಾಗದಲ್ಲಿ ನಮಗೆ ಪ್ರಶಸ್ತಿ ಲಭಿಸಿವೆ. ಆದರೆ ವಿಶ್ವ ಬಸವಾಂಬೆ ಪ್ರಶಸ್ತಿ ನಮ್ಮ ಕಾರ್ಯಕ್ಕೆ ಅಮ್ಮ ನೀಡುವ ಕೈ ತುತ್ತು ಆಗಿದೆ ಎಂದು ಭಾವನಾತ್ಮಕವಾಗಿ ನುಡಿದರು. ಪ್ರಶಸ್ತಿ ಪ್ರದಾನದ ವಿವರವನ್ನು ಪಾಳಾ ಶ್ರೀ ಡಾ. ಗುರುಮೂರ್ತಿ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಹುಕ್ಕೇರಿ ಶ್ರೀಗಳು ಎಂದರೆ ನಮ್ಮ ಶಿವಾಚಾರ್ಯರಲ್ಲಿಯೇ ಕ್ರಿಯಾಶೀಲ ಶಿವಾಚಾರ್ಯರು. ಗಡಿ ಭಾಗದಲ್ಲಿ ಕನ್ನಡದ ಉಳಿವಿಗಾಗಿ ಸಾಕಷ್ಟು ಶ್ರಮಿಸುತ್ತಿದ್ದಾರೆ. ಸಾವಿರಾರು ಮಕ್ಕಳಿಗೆ ವೇಧ ಅಧ್ಯಯನ, ಸುಮಾರು 500ಕ್ಕೂ ಹೆಣ್ಣು ಮಕ್ಕಳಿಗೆ ವೇಧ ಕಲಿಸಿದ ಕೀರ್ತಿ ಇವರಿಗೆ ಸಲ್ಲುತ್ತದೆ. ಕರ್ನಾಟಕ ರಾಜ್ಯೋತ್ಸವದಲ್ಲಿ ಹೋಳಿಗೆ ಊಟ ನೀಡಿರುವ ಶ್ರೀಗಳು ಕಾವಿ ಕುಲಕ್ಕೆ ಮಾದರಿ ಎಂದರು.

ಈ ಸಂದರ್ಭದಲ್ಲಿ ಕಲಬುರಗಿ ಭಾಗದ ವಿವಿಧ ಮಠಾಧೀಶರು, ಗಣ್ಯರು ಉಪಸ್ಥಿತರಿದ್ದರು.

# ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ



ಚಿಕ್ಕೋಡಿ: ಚಿಕ್ಕೋಡಿ ತಾಲೂಕಿನ ವಡ್ರಾಳ ಗ್ರಾಮ ಪಂಚಾಯತಯಲ್ಲಿ ಪ್ರಗತಿಯಲ್ಲಿರುವ ನರೇಗಾ ಕಾಮಗಾರಿ ಸ್ಥಳದಲ್ಲಿ ಹಾಜರಿದ್ದ ಕೂಲಿಕಾರರಿಗೆ ಸಾರ್ವತ್ರಿಕ ಲೋಕ ಸಭಾ ಚುನಾವಣೆ-2024ರ ಅಂಗವಾಗಿ ಮತದಾನ ಜಾಗೃತಿ ಮಾಡಲಾಯಿತು.

ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದ ತಾಲೂಕ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಜಗದೀಶ ಕಮ್ಮಾರ 18 ವರ್ಷದ ಮೇಲ್ಪಟ್ಟ ಪ್ರತಿಯೊಬ್ಬರು ಮತದಾನವನ್ನು ಮಾಡಲೇಬೇಕು ಆದ್ದರಿಂದ ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೆ ನಿರ್ಭೀತರಾಗಿ ಮತದಾನ ಮಾಡುವ ಮೂಲಕ ಜಿಲ್ಲೆಯಲ್ಲಿ ಈ ಬಾರಿ ಪ್ರತಿಶತ 100% ರಷ್ಟು ಮತದಾನ ಮಾಡಿಸುವುದು ನಮ್ಮ- ನಿಮ್ಮೆಲ್ಲರ ಗುರಿ ಆಗಿದೆ ಎಂದು ಹೇಳಿದರು.

ಮೇ 7ನೇ ತಾರೀಖಿನಂದು ನಮ್ಮ ಭಾಗದಲ್ಲಿ ನಡೆಯುವ ಲೋಕಸಭೆ ಚುನಾವಣೆಯ ಪ್ರಜಾಪ್ರಭುತ್ವದ ಹಬ್ಬದಲ್ಲಿ ಭಾಗವಹಿಸಿ ಉತ್ತಮರನ್ನು ಆಯ್ಕೆ ಮಾಡೋಣ ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸಿಬ್ಬಂದಿಗಳು, ನರೇಗಾ ಕೂಲಿಕಾರ್ಮಿಕರು ಉಪಸ್ಥಿತರಿದ್ದರು.

## ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರಾಮ್ 117ನೇ ಜನ್ಮ ದಿನಾಚರಣೆ

# ಸಮಾನತೆಗೆ ಸ್ಪಷ್ಟ ರೂಪ ಕೊಟ್ಟವರು ಡಾ.ಬಾಬು ಜಗಜೀವನರಾಮ್: ಡಾ. ಹನುಮಂತಪ್ಪ ಸಂಜೀವಣ್ಣವರ

ಬೆಳಗಾವಿ: ದೇಶದಲ್ಲಿ ದೀರ್ಘ ಕಾಲದಿಂದ ಬೆಳೆದುಕೊಂಡು ಬಂದಿದ್ದ ಮೇಲು-ಕೀಳು ತಾರತಮ್ಯ, ಜಾತಿ ಪದ್ಧತಿ, ಅಸ್ಪೃಶ್ಯ ಎಂಬ ಮನೋಭಾವಗಳನ್ನು ತೊಡೆದು ಹಾಕಲು ಸಾಮಾಜಿಕ ನೆಲೆಗಟ್ಟಿನಲ್ಲಿ ಹೋರಾಡಿ, ಶೋಷಿತ ಸಮುದಾಯದ ಏಳಿಗೆಗೆ ಶ್ರಮಿಸುವುದರ ಮೂಲಕ ಸಮಾನತೆಯ ಸಂದೇಶಕ್ಕೆ ಒಂದು ಸ್ಪಷ್ಟ ರೂಪ ಕೊಟ್ಟ ನಾಯಕರು ಡಾ. ಬಾಬು ಜಗಜೀವನರಾಮ್ ಅವರು ಎಂದು ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಹನುಮಂತಪ್ಪ ಸಂಜೀವಣ್ಣವರ ತಿಳಿಸಿದರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಸಂಗಮೇಶ್ವರ ನಗರದ ಡಾ. ಬಾಬು ಜಗಜೀವನರಾಮ್ ಉದ್ಯಾನವನದಲ್ಲಿ ಶುಕ್ರವಾರ (ಏ.05) ನಡೆದ ಡಾ. ಬಾಬು ಜಗಜೀವನರಾಮ್ 117 ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಮಾಜದಲ್ಲಿ ಪ್ರತಿಯೊಬ್ಬರಿಗೂ ಗುಣಮಟ್ಟದ ಶಿಕ್ಷಣ ಪಡೆದು ಉತ್ತಮ ಜೀವನ ರೂಪಿಸಿಕೊಳ್ಳಬೇಕು. ಶೋಷಣೆ ಮುಕ್ತ ಸಮಾಜ ನಿರ್ಮಾಣಕ್ಕೆ ಬಾಬು ಜಗಜೀವನರಾಮ್, ಡಾ. ಬಿ.ಆರ್. ಅಂಬೇಡ್ಕರ್ ಅವರು ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದಾರೆ. ಅದೇ ರೀತಿಯಲ್ಲಿ ಕನಕದಾಸರು, ಮಹಾತ್ಮಾ ಗಾಂಧೀಜಿ ಸಹ ಸಾಕಷ್ಟು ಶೋಷಣೆಗೆ ಒಳಗಾಗಿ ಶೋಷಣೆ ಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ್ದಾರೆ ಎಂದು ತಿಳಿಸಿದರು.

ಸಣ್ಣ ವಯಸ್ಸಿನಲ್ಲೇ ತಂದೆಯನ್ನು ಕಳೆದುಕೊಂಡ ಜಗಜೀವನ್ ರಾಮ್ ತಾಯಿ ವಾಸಂತಿ ದೇವಿಯವರ ಆರೈಕೆಯಲ್ಲಿ ಬೆಳೆದರು. ಅವರು ಮಾಧ್ಯಮಿಕ ಶಾಲೆಯಲ್ಲಿದ್ದಾಗ ಕುಡಿಯುವ ನೀರಿನ ಪ್ರತ್ಯೇಕ ಮಡಕೆಯಿಂದಾಗಿ ಮೊದಲ ಬಾರಿಗೆ ಅಸ್ಪೃಶ್ಯತೆಯ ಅಪಮಾನ ಜಗಜೀವನರಾಮ್ ಅವರನ್ನು ಬಹುವಾಗಿ ಕಾಡಿತು. ಇದರಿಂದ ಸಿಟ್ಟಿಗೆದ್ದ ಅವರು ಎರಡು ಬಾರಿ ಆ ಮಡಕೆಗಳನ್ನು ಒಡೆದುಹಾಕಿ ತಮ್ಮ ಕೋಪವನ್ನು ಪ್ರದರ್ಶಿಸಿದರು. ಈ ಜಾತಿ ಪದ್ಧತಿಯ ಅಪಮಾನದ ಗಾಯ ಮಾತ್ರ ಬಾಬು ಜಗಜೀವನರಾಮ್ ಅವರ ಮನದಲ್ಲಿ ಮನೆ ಮಾಡಿತು.

ಮುಂದೆ ದೊಡ್ಡ ನಾಯಕರಾಗಿ ರೂಪುಗೊಂಡ ಜಗಜೀವನ ರಾಮ್ ಅವರು ಗಾಂಧೀಜಿಯವರು ಆರಂಭಿಸಿದ್ದ ಅಸ್ಪೃಶ್ಯತೆಯ ವಿರುದ್ಧದ ಹೋರಾಟದಲ್ಲಿ ಪಾಲ್ಗೊಂಡರು. ಅಂದಿನ ಪ್ರಥಮ ಹಂಗಾಮಿ ಸರ್ಕಾರ ರಚನೆಯಾದಾಗ ಅವರಿಗೆ ಕಾರ್ಮಿಕ ಖಾತೆಯನ್ನು ನೀಡಲಾಗಿತ್ತು. ಮುಂದೆ ಅವರು ತಮ್ಮ ರಾಜಕೀಯ ಪಯಣದಲ್ಲಿ ಹಿಂದುರುಗಿ



ನೋಡಿದ್ದೇ ಇಲ್ಲ. ಹಲವಾರು ಖಾತೆಗಳ ಸಚಿವ ಸ್ಥಾನಗಳನ್ನು ನಿರ್ವಹಿಸಿದರು.

"ಹಸಿರುಕ್ರಾಂತಿ ಹರಿಕಾರ" ಎಂದೇ ಕರೆಯಲ್ಪಡುವ ಜಗಜೀವನ ರಾಮ್ ಧೀಮಂತ ರಾಷ್ಟ್ರೀಯ ನಾಯಕ, ಸ್ವಾತಂತ್ರ್ಯ ಮತ್ತು ಸಾಮಾಜಿಕ ನ್ಯಾಯ ಹೋರಾಟಗಾರ ಹಾಗೂ ಅತ್ಯುತ್ತಮ ಸಂಸದೀಯ ಪಟುವಾಗಿದ್ದರು. ಬಾಬು ಜಗಜೀವನ ರಾಮ್ ಅವರು ಮೊದಲ ಉಪ ಪ್ರಧಾನಿಯಾಗಿ ನಮ್ಮ ದೇಶಕ್ಕೆ ಮಹತ್ತರ ಕೊಡುಗೆ ನೀಡಿದ್ದಾರೆ ಎಂದು ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಹನುಮಂತಪ್ಪ ಸಂಜೀವಣ್ಣವರ ಅವರು ಉಪನ್ಯಾಸದಲ್ಲಿ ತಿಳಿಸಿದರು.

**ಸಂವಿಧಾನ ಪೀಠಿಕೆ ಭೋದನೆ:**

ವೇದಿಕೆ ಕಾರ್ಯಕ್ರಮ ಪ್ರಾರಂಭಕ್ಕೂ ಮುಂಚೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ ಅವರು ಹಸಿರು ಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರ ಮೂರ್ತಿಗೆ ಮಾಲಾರ್ಪಣೆ ಮಾಡುವುದರ ಮೂಲಕ ಗೌರವ ಸಲ್ಲಿಸಿದರು.

ಬಳಿಕ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ ಅವರು ಸಂವಿಧಾನ ಪೀಠಿಕೆ ಭೋಧಿಸಿದರು.

ವಿದ್ಯಾರ್ಥಿಗಳಿಗೆ ಸನ್ಮಾನ: ಕಾರ್ಯಕ್ರಮದ ಕೊನೆಯಲ್ಲಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ, ಮಹಾನಗರ ಪಾಲಿಕೆ ಆಯುಕ್ತ ಲೋಕೇಶ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನವೀನ ಶಿಂತ್ರೆ, ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ, ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಸವರಾಜ ಕುರಿಹುಲಿ, ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಅಬ್ದುಲ್ ರಶೀದ್ ಮಿರಜನ್ನವರ, ಮುಖಂಡರಾದ ಮಲ್ಲೇಶ ಚೌಗಲಾ, ಯಲ್ಲಪ್ಪ ಹುದಲಿ, ಕರೆಪ್ಪ ಗುಡೆನ್ನವರ, ದುರ್ಗೇಶ ಮೇತ್ರಿ, ವಿವೇಕ ಕರ್ಪೇ ಸೇರಿದಂತೆ ಅನೇಕ ಮುಖಂಡರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

**ಮೆರವಣಿಗೆ ಕಾರ್ಯಕ್ರಮ:**

ಇದಕ್ಕೂ ಮೊದಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಅವರು ಹಸಿರು ಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ ಮೆರವಣಿಗೆಗೆ ಚಾಲನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಿಂದ ಆರಂಭಗೊಂಡ ಮೆರವಣಿಗೆ ಚನ್ನಮ್ಮ ವೃತ್ತದ ಮಾರ್ಗವಾಗಿ ಸಂಗಮೇಶ್ವರ ನಗರದ ಡಾ. ಬಾಬು ಜಗಜೀವನರಾಮ್ ಉದ್ಯನವದವರೆಗೆ ತಲುಪಿತು. ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಭಾಗವಹಿಸಿದ್ದವು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಲೋಕೇಶ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನವೀನ ಶಿಂತ್ರೆ, ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ, ಬೆಳಗಾವಿ ತಹಶೀಲ್ದಾರ ಸಿದ್ದಾರಾಯ ಭೋಸಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಶಿವಪ್ರಿಯಾ ಕಡೆಚೂರು, ಮುಖಂಡರಾದ ಮಲ್ಲೇಶ ಚೌಗಲಾ, ಯಲ್ಲಪ್ಪ ಹುದಲಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು, ಸಮಾಜದ ಬಾಂಧವರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

## ನಿಂತಿದ್ದ ಬಸ್‌ಗೆ ಡಿಕ್ಕಿ ಹೊಡೆದ ಚುನಾವಣಾ ವೀಕ್ಷಕರ ವಾಹನ




ಕೊಪ್ಪಳ: ನಿಂತಿದ್ದ ಕೆಕೆಆರ್ಟಿಸಿ ಸಾರಿಗೆ ಬಸ್ಗೆ ಚುನಾವಣಾ ವೀಕ್ಷಕರ ವಾಹನ ಡಿಕ್ಕಿ ಹೊಡೆದಿದೆ. ಪರಿಣಾಮ ಚುನಾವಣಾ ವೀಕ್ಷಕರ ವಾಹನ ಜಖಂಗೊಂಡಿದೆ.

ಚುನಾವಣಾ ವೀಕ್ಷಕರ ವಾಹನದ ಡ್ರೈವರ್ ಶಿವಾನಂದಗೆ ಗಂಭೀರ ಗಾಯವಾಗಿದೆ. ಓರ್ವ ಪೇದೆಗೂ ಸಣ್ಣಪುಟ್ಟ ಗಾಯವಾಗಿದೆ. ಗಾಯಾಳುಗಳನ್ನು ಗಂಗಾವತಿ ಸಾರ್ವಜನಿಕ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ವಿದ್ಯಾನಗರದಲ್ಲಿ ದುರ್ಘಟನೆ ನಡೆದಿದೆ.

ಘಟನೆ ಮಾಹಿತಿ ಪಡೆದು ಗಂಗಾವತಿ ತಹಶಿಲ್ದಾರ್ ಯು.ನಾಗರಾಜ್ ಆಸ್ಪತ್ರೆಗೆ ಆಗಮಿಸಿದ್ದಾರೆ. ಗಾಯಾಳುಗಳ ಸೂಕ್ತ ಚಿಕಿತ್ಸೆ ನೀಡುವಂತೆ ಸೂಚನೆ ನೀಡಿದ್ದಾರೆ. ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಘಟನೆ ನಡೆದಿದೆ.

## ಜಲಾಶಯದಲ್ಲಿ ಮುಳುಗಿ ತಾಯಿ- ಇಬ್ಬರು ಮಕ್ಕಳು ಜಲಸಮಾಧಿ



ಚಾಮರಾಜನಗರ: ಬಟ್ಟೆ ತೊಳೆಯಲು ಹೋಗಿ ಮೂವರು ನೀರುಪಾಲಾದ ಘಟನೆ ಮಲೆ ಮಹದೇಶ್ವರ ಬೆಟ್ಟ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಮೃತರನ್ನು ಪುದೂರು ಗ್ರಾಮದ ನಿವಾಸಿ ಮೀನಾ (33) ಪವಿತ್ರ (13) ಕೀರ್ತಿ (12) ಎಂದು ಗುರುತಿಸಲಾಗಿದೆ.

ಮಧ್ಯಾಹ್ನ ಗೋಪಿನಾಥಂ ಜಲಾಶಯಕ್ಕೆ ಮೂವರು ಬಟ್ಟೆ ತೊಳೆಯಲು ಹೋಗಿದ್ದ ವೇಳೆ ಅವಘಡ ನಡೆದಿದೆ. ಬಟ್ಟೆ ತೊಳೆಯುತ್ತಿದ್ದ ಮೀನಾ ಆಕಸ್ಮಿಕವಾಗಿ ಕಾಲು ಜಾರಿ ಬಿದ್ದಿದ್ದರು. ತಾಯಿ ನೀರಿನಲ್ಲಿ ಕೊಚ್ಚಿ ಹೋಗುತ್ತಿದ್ದನ್ನು ಕಂಡ ಮಕ್ಕಳು ಸಹಾಯಕ್ಕೆ ಧಾವಿಸಿದ್ದಾರೆ. ನಂತರ ನೀರಿನಿಂದ ಹೊರಗೆ ಬರಲು ಆಗದೇ ಮೂವರು ನೀರಿನಲ್ಲಿ ಕೊಚ್ಚಿ ಹೋಗಿದ್ದಾರೆ. ಮೃತ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

## ಏ.18 ರಂದು ಜಾಹೀರ ಲೀಲಾವ

ಬೆಳಗಾವಿ: ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾದಂ.ಗಳು ಚಿಕ್ಕೋಡಿರವರ ನ್ಯಾಯಾಲಯದಲ್ಲಿ ಏ.18 ರಂದು ಮಧ್ಯಹ್ನ 4 ಗಂಟೆಗೆ ಜಾಹೀರ ಲೀಲಾವನ್ನು ಏರ್ಪಡಿಸಲಾಗಿದೆ.

ಎಲ್.ಜಿ, ನೋಕಿಯಾ, ಸ್ಯಾಮಸಂಗ್, ಕಾರ್ಬನ್, ಮೈಕ್ರೋಮ್ಯಾಕ್ಸ್ ಲಾವಾ ಕಂಪನಿ ಮೊಬೈಲ್ ಸೇರಿದಂತೆ ಅನೇಕ ಕಂಪನಿಯ ಮೊಬೈಲ್‌ಗಳು ಹಾಗೂ ಕಬ್ಬಿಣದ ವಸ್ತುಗಳು ಜಾಹೀರ ಲೀಲಾವದಲ್ಲಿ ಇರುತ್ತವೆ ಎಂದು ಚಿಕ್ಕೋಡಿ ಪ್ರಧಾನ ದಿವಾಣಿ ನ್ಯಾಯಾದೀಶರು ಹಾಗೂ ಪ್ರ.ದ.ನ್ಯಾದಂ.ಗಳಾದ ಅಶೋಕ ಆರ್.ಎಚ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚುನಾವಣಾ ಸೆಕ್ಟರ್ ಆಫೀಸರ್ ತರಬೇತಿ

# ಆರ್.ಓ ಮತ್ತು ಪಿ.ಆರ್.ಓ ಮಧ್ಯ ಸೆಕ್ಟರ್ ಅಧಿಕಾರಿಗಳು ಸೇತುವೆಯಂತೆ ಕಾರ್ಯನಿರ್ವಹಿಸಬೇಕು: ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ್ ಶಿಂಧೆ

ಚಿಕ್ಕೋಡಿ: ಚುನಾವಣಾ ಕಾರ್ಯಗಳು ನಿಯಮಾನುಸಾರ ನಡೆಯುವಲ್ಲಿ ಸೆಕ್ಟರ್ ಅಧಿಕಾರಿಗಳ ಪಾತ್ರ ಬಹು ಮುಖ್ಯವಾಗಿದೆ. ಅವರು ಚುನಾವಣಾಧಿಕಾರಿಗೂ (ಆರ್.ಓ) ಮತ್ತು ಮತಗಟ್ಟೆಯಲ್ಲಿನ ಪಿ.ಆರ್.ಓ ಅಧಿಕಾರಿಗೂ ಸಂಪರ್ಕ ಸೇತುವೆಯಾಗಿ ಕಾರ್ಯ ನಿರ್ವಹಿಸುತ್ತಾರೆ ಎಂದು ಜಿ.ಪಂ. ಸಿ.ಇ.ಓ. ಹಾಗೂ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಯು ಆದ ರಾಹುಲ ಶಿಂಧೆ ಅವರು ಹೇಳಿದರು.

ಅವರು ಶುಕ್ರವಾರ (ಎ.5) ರಂದು ಚಿಕ್ಕೋಡಿಯ ಸಿ.ಬಿ.ಕೋರೆ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಲೋಕಸಭಾ ಚುನಾವಣೆ-2024ರ ಸೆಕ್ಟರ್ ಅಧಿಕಾರಿಗಳಿಗೆ, ತಾಲೂಕ ಮಟ್ಟದ ಚುನಾವಣಾ ಸಂಪನ್ಮೂಲ ವ್ಯಕ್ತಿಗಳಿಗೆ ಮತ್ತು ತರಬೇತಿ ನೀಡುವ ಸಂಪನ್ಮೂಲ ವ್ಯಕ್ತಿಗಳ ತರಬೇತಿ



ಕಾರ್ಯಗಾರದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಚುನಾವಣೆಯಲ್ಲಿ ತಮ್ಮ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವ ಮೂಲಕ ಚುನಾವಣೆಯನ್ನು ಯಶಸ್ವಿಗೊಳಿಸಬೇಕು. ಭಾರತ ಚುನಾವಣಾ ಆಯೋಗದ ಅಧೀನದಲ್ಲಿ ನಾವೆಲ್ಲ ಕಾರ್ಯನಿರ್ವಹಿಸುತ್ತಿದ್ದು, ಎಲ್ಲ ಅಧಿಕಾರಿಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು. ತರಬೇತಿಯಲ್ಲಿ ನೀಡುವ ಮಾಹಿತಿಯನ್ನು ಸರಿಯಾಗಿ ತಿಳಿದು, ತಮ್ಮ ಕರ್ತವ್ಯಗಳನ್ನು ಜವಾಬ್ದಾರಿಯುತವಾಗಿ ನಿರ್ವಹಿಸುವಂತೆ ತಿಳಿಸಿದರು.

ಪ್ರತಿ ಮತಗಟ್ಟೆಯ ಪಿ.ಆರ್.ಓ ಮತ್ತು ಎಪಿ.ಆರ್.ಓ.ಗಳು ಮತಗಟ್ಟೆಯಲ್ಲಿ ತಾವು ನಿರ್ವಹಿಸಬೇಕಾದ ಪ್ರತಿ ಕರ್ತವ್ಯದ ಬಗ್ಗೆ ಅರಿವು ಹೊಂದಿರಬೇಕು. ಅವರಿಗೆ ಅಗತ್ಯವಿರುವ ಮಾಹಿತಿ, ತರಬೇತಿಯನ್ನು ಸೆಕ್ಟರ್ ಅಧಿಕಾರಿಗಳು, ಸಂಪನ್ಮೂಲ ವ್ಯಕ್ತಿಗಳು ನೀಡಬೇಕೆಂದು ಅವರು ಹೇಳಿದರು.

ಚುನಾವಣಾ ಕರ್ತವ್ಯಕ್ಕೆ ನಿಯೋಜಿತ ಪ್ರತಿ ಅಧಿಕಾರಿ ಮತ್ತು ಸಿಬ್ಬಂದಿಗಳು ಭಾರತ ಚುನಾವಣಾ ಆಯೋಗ ನೀಡಿರುವ ನೀರ್ದೇಶನಗಳಂತೆ ತಮ್ಮ ಕರ್ತವ್ಯಗಳನ್ನು ಜವಾಬ್ದಾರಿಯುತವಾಗಿ ನಿರ್ವಹಿಸಬೇಕು. ಚುನಾವಣಾ ಪ್ರಕ್ರಿಯೆಯಲ್ಲಿ ಸೆಕ್ಟೆರ ಅಧಿಕಾರಿಗಳ ಪಾತ್ರ ಪ್ರಮುಖವಾಗಿದ್ದು ಯಾವುದೇ ಕಾರಣ-ಕ್ಕೂ ಚುನಾವಣಾ ಕಾರ್ಯಗಳ ಕುರಿತು ಉದಾಸೀನ ತೋರದಂತೆ ತಿಳಿಸಿದರು. ಇಂದಿನ ತರಬೇತಿ ಕಾರ್ಯಾಗಾರದಲ್ಲಿ ತಮ್ಮ ಸಂದೇಹಗಳನ್ನು ಪರಿಹ-ರಿಸಿಕೊಂಡು ಕರ್ತವ್ಯದಲ್ಲಿ ಯಾವುದೇ ಲೋಪಗಳಿಗೆ ಆಸ್ಪದ ನೀಡದಂತೆ ಕಾರ್ಯನಿರ್ವಹಿಸಲು ಸೂಚನೆ ನೀಡಿದರು.

ಎಲ್.ಎ.ಸಿ ಜಂಟಿ ನಿರ್ದೇಶಕ ಶಂಕರಾನಂದ ಬನಶಂಕರಿ ಹಾಗೂ ಸಿ.ಬಿ.ಕೋರೆ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಧ್ಯಾಪಕರಾದ ಎನ್.ವಿ.ಶಿವರಾಮ ಅವರುಗಳು ಸೆಕ್ಟರ್ ಅಧಿಕಾರಿಗಳಿಗೆ ಪ್ರಾತ್ಯಕ್ಷಿಕೆ ಮೂಲಕ ತರಬೇತಿ ನೀಡಿದರು.

ಕಾರ್ಯಾಗಾರದಲ್ಲಿ ತರಬೇತಿ ನೋಡೆಲ್ ಅಧಿಕಾರಿಯಾದ ಶ್ರೀಮತಿ ಗೀತಾ ಕೌಲಗಿ, ಸಹಾಯಕ ಚುನಾವಣಾಧಿಕಾರಿ ಬಸವರಾಜ ಅಡವಿಮಠ, ಚಿಕ್ಕೋಡಿ ಉಪವಿಭಾಗಾಧಿಕಾರಿ ಶ್ರೀಮತಿ ಮೆಹಬೂಬಿ, ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು, ತಹಶೀಲ್ದಾರರು, ಸೆಕ್ಟೆರ ಅಧಿಕಾರಿಗಳು ಹಾಜರಿದ್ದರು.

## ಆನಗೋಳ, ವಡಗಾವಿ ಪ್ರದೇಶದಲ್ಲಿ ಮೃಣಾಲ ಹೆಬ್ಬಾಳಕರ್ ಮತಯಾಚನೆ

ಬೆಳಗಾವಿ: ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಅನಗೋಳ ಹಾಗೂ ವಡಗಾಂವಿಯ ವಿವಿಧ ಸ್ಥಳಗಳಲ್ಲಿ ಲೋಕಸಭೆಯ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಗುರುವಾರ ಸಂಜೆ ಚುನಾವಣೆಯ ಪ್ರಚಾರ ನಡೆಸಿ, ಮತ ಯಾಚಿಸಿದರು.

ಭಾರೀ ಸಂಖ್ಯೆಯಲ್ಲಿ ಮನೆಯಿಂದ ಹೊರಗೆ ಬಂದ ಜನರು ಬೆಂಬಲ ಸೂಚಿಸಿ, ಈ ಬಾರಿ ಕಾಂಗ್ರೆಸ್ ಗೆಲುವು ಖಚಿತ ಎಂದು ಭರವಸೆ ನೀಡಿದರು. ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳಿಂದಾಗಿ ನಾವು ಎರಡು ಹೊತ್ತು ಚೆನ್ನಾಗಿ ಊಟ ಮಾಡುತ್ತಿದ್ದೇವೆ,

ನಮಗೆ ನೆಮ್ಮದಿ ಸಿಕ್ಕಿದೆ. ಉಚಿತವಾಗಿ ಬಸ್ ಗಳಲ್ಲಿ ಪ್ರಯಾಣಿಸಿ, ಮಾರ್ಕೆಟ್ ಮಾಡುತ್ತಿದ್ದೇವೆ, ದೇವಸ್ಥಾನಗಳಿಗೆ ಭೇಟಿ ನೀಡುತ್ತಿದ್ದೇವೆ. ಗೃಹಲಕ್ಷ್ಮೀ, ಶಕ್ತಿ ಮತ್ತು ಅನ್ನಭಾಗ್ಯ ಯೋಜನೆಯಿಂದ ನಮ್ಮ ಮನೆ ನಡೆಯುತ್ತಿದೆ. ನೇಕಾರರಿಗೆ ಕಾಂಗ್ರೆಸ್



ಮಾಡಿದಷ್ಟು ಸಹಕಾರವನ್ನು ಯಾರೂ ಮಾಡಿಲ್ಲ. ಹಾಗಾಗಿ ಖಂಡಿತವಾಗಿಯೂ ನಾವು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡುತ್ತೇವೆ ಎಂದು ಆಶ್ವಾಸನೆ ನೀಡಿದರು.

ಕ್ಷೇತ್ರದ ಅಭಿವೃದ್ಧಿಗೆ ಹಲವಾರು ಕನಸುಗಳನ್ನು ಹೊತ್ತು ಚುನಾವಣೆಗೆ ನಿಂತಿ-ದ್ದೇನೆ. ನಿಮ್ಮ ಆಶೀರ್ವಾದವಿರಲಿ. ನಿಮ್ಮ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುತ್ತೇನೆ ಎಂದು ಮೃಣಾಲ ಹೆಬ್ಬಾಳಕರ್ ಭರವಸೆ ನೀಡಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಯುವರಾಜ ಕದಂ ಸೇರಿದಂತೆ ಹಲವಾರು ಸ್ಥಳೀಯ ಮುಖಂಡರು, ಕಾರ್ಯಕರ್ತರು, ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಉಪಸ್ಥಿತ-ರಿದ್ದರು.

ಇದೇ ವೇಳೆ ಬೆಳಗಾವಿ ನೇಕಾರರ ಸಂಘದ ಮುಖಂಡ ಪಿ.ಡಿ.ದೋತ್ರೆಯವರ ಮನೆಗೆ ಮೃಣಾಲ ಹೆಬ್ಬಾಳಕರ್ ಸೌಜನ್ಯಯುತ ಭೇಟಿ ನೀಡಿದರು.

## ಜೀವಂತ ಹಾಗೂ ಮರು ಮದುವೆಯಾಗದ ಕುರಿತು ಪ್ರಮಾಣ ಪತ್ರ ಸಲ್ಲಿಸಲು ಸೂಚನೆ

ಬೆಳಗಾವಿ: ಪ್ರತಿ ವರ್ಷದಲ್ಲಿ ಎರಡು ಬಾರಿ ಜೀವಂತ ಹಾಗೂ ಮರು ಮದುವೆ ಆಗದೇ ಇರುವ ಪ್ರಮಾಣ ಪತ್ರ ನೀಡುವುದು. ಕಾರ್ಯನಿರ್ವಾಹಕ ಅಭಿಯಂತರರು(ವಿ) ಕಾರ್ಯ ಮತ್ತು ಪಾಲನೆ ನಗರ ವಿಭಾಗ ಹುವಿಸಕಂನಿ ನೆಹರು ನಗರದ ಬೆಳಗಾವಿಯ ಕಚೇ-ರಿಯಿಂದ ಪಿಂಚಣಿ ಹಾಗೂ ಕುಟುಂಬ ಪಿಂಚಣಿಯನ್ನು ಪಡಿಯುತ್ತಿರುವ ನಿವೃತ್ತ ಅಧಿಕಾರಿ ಹಾಗೂ ನೌಕರರು ಮತ್ತು ಕುಟುಂಬ ಪಿಂಚಣಿದಾರರು ಏ.15ರ ಒಳಗಾಗಿ ಜಿವಂತ/ಮರು ಮದುವೆ ಆಗದೇ ಇರುವ ಪ್ರಮಾಣ ಪತ್ರವನ್ನು ಕಚೇರಿಗೆ ಸಲ್ಲಿಸಬೇಕು. ಸದರಿ ಅವಧಿ ಮೀರಿ ಬಂದ ಪ್ರಮಾಣ ಪತ್ರ ನೀಡದೇ ಇರುವ ಪಿಂಚಣಿದಾರರ ಪಿಂಚಣಿಯನ್ನು ತಡೆ ಹಿಡಿಯಲಾಗುವುದು ಎಂದು ಬೆಳಗಾವಿಯ ನೆಹರು ನಗರದ ಹುವಿಸಕಂನಿ, ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನೀಯರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ನಾಪತ್ತೆ



ಬೆಳಗಾವಿ: ಬೆಳಗಾವಿ ಜಿಲ್ಲೆಯ ಗಣೇಶಪೂರದ ಜ್ಯೋತಿ ನಗರದ ನಿವಾಸಿ ಲಕ್ಷ್ಮಣ ಬಿಕು ಖೊರಾಗಡೆ ಇವರು ಮನೆಯಿಂದ ಹೋಗಿ ಎಲ್ಲೋ ಕಾಣೆಯಾಗಿದ್ದಾನೆ ಎಂದು ತಾಯಿ ಲೀಲಾ ಬಿಕು ಖೊರಾಗಡೆ ಅವರು ಬೆಳಗಾವಿಯ ಕ್ಯಾಂಪ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿ ಚಹರೆ: 5-4 ಎತ್ತರವಿದ್ದು, ಮೈಯಿಂದ ಸದೃಢ, ದುಂಡು ಮುಖ, ಉದ್ದ ಮೂಗು, ಗೋಧಿಗೆಂಪು ಮೈಬಣ್ಣ ಇರುತ್ತದೆ. ಹಸಿರು ಬಣ್ಣದ ಟಿ-ಶರ್ಟ್ ಹಾಗೂ ನೀಲಿ ಬಣ್ಣ ಜಿನ್ಸ್ ಪ್ಯಾಂಟ್ ಧ-ರಿಸಿರುತ್ತಾನೆ. ಸದರಿ ಕಾಣೆಯಾದ ವ್ಯಕ್ತಿ ಮಾಹಿತಿ ಸಿಕ್ಕಲ್ಲಿ ಬೆಳಗಾವಿ ಕ್ಯಾಂಪ್ ಪೊಲೀಸ್ ಠಾಣೆ ದೂರವಾಣಿ: 08312405234 ಅಥ-ವಾ ಪೊಲೀಸ್ ಕಂಟ್ರೋಲ್ ರೂಮ್ 08312405278 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಕ್ಯಾಂಪ್ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ನಾಪತ್ತೆ




ಬೆಳಗಾವಿ: ಮಹಾರಾಷ್ಟ್ರದ ಮಾಳೆಗಾಂವ ತಾಲೂಕಿನ ವಡಗಾಂವ ನಗರದ ನಿವಾಸಿಯು ಎಮ್.ಎಲ್.ಐ.ಆರ್.ಸಿ ನಲ್ಲಿ ಸಿಪಾಯಿಯಾಗಿ ಕಾರ್ಯನಿರ್ವಹಿಸುತ್ತಿದ ಸಮಾಧಾನ ಪಂಢ-ರಿನಾಥ ಜಾಧವ(32) ಇವರು ಎಮ್.ಎಲ್. ಆರ್.ಸಿ ಕ್ಯಾಂಪದಿಂದ ಎಲ್ಲಿಯೋ ಹೋಗಿ ಕಾಣೆಯಾಗಿದ್ದಾನೆ ಎಂದು ಕ್ಯಾಂಪ್‌ನ ಹಾಗೂ ಆತನ ಗೆಳೆಯ ಆನಂದ ಸೋಪಾನ ಕ್ಯಾಂಪ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಕಾಣೆಯಾದ ವ್ಯಕ್ತಿ ಚಹರೆ: ಉದ್ದ ಮೂಖ, ಉದ್ದ ಮೂಗು, ಮೈಬಣ್ಣ ಸಾದಗಪ್ಪು. ಬಿಳಿ ಶರ್ಟ ಮತ್ತು ನೀಲಿ ಪ್ಯಾಂಟ್ ಧರಿಸಿರುತ್ತಾರೆ.ಸದರಿ ಕಾಣೆಯಾದ ವ್ಯಕ್ತಿ ಮಾಹಿತಿ ಸಿಕ್ಕಲ್ಲಿ ಬೆಳಗಾವಿ ಕ್ಯಾಂಪ್ ಪೊಲೀಸ್ ಠಾಣೆ ದೂರವಾಣಿ: 08312405234 ಅಥವಾ ಪೊಲೀಸ್ ಕಂಟ್ರೋಲ್ ರೂಮ್ 08312405278 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಕ್ಯಾಂಪ್ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಗ್ರಾಮಗಳಲ್ಲಿ ಕೈ ಅಭ್ಯರ್ಥಿ ಪ್ರಿಯಾಂಕ ಜಾರಕಿಹೊಳಿ ಅಬ್ಬರದ ಪ್ರಚಾರ

ಬೆಳಗಾವಿ: ಕಳೆದ 5 ವರ್ಷ ಬಿಜೆಪಿ ಸಂಸದ ಅವರಿಗೆ ಅವಕಾಶ ನೀಡಿದ್ದಿರಿ. ಆದರೆ ನಿಮ್ಮ ನಿರೀಕ್ಷೆಯಂತೆ ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸಗಳು ಆಗಿಲ್ಲ. ಅದಕ್ಕಾಗಿ ಈ ಭಾರಿ ಅಭಿವೃದ್ಧಿಗೆ ಕಾಂಗ್ರೆಸ್ ಅಭ್ಯರ್ಥಿಯಾದ ನನ್ನನ್ನು ಬೆಂಬಲಿಸಬೇಕು ಎಂದು ಚಿಕ್ಕೋಡಿ ಲೋಕಸಭಾ ಕೈ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಹೇಳಿದರು.

ಯಮಕನಮರಡಿ ವಿಧಾನಸಭಾ ಕ್ಷೇತ್ರದ ಹೊಸ ವಂಟಮುರಿ, ಹುದಲಿ ಜಿಲ್ಲಾ ಪಂವ್ಯಾಪ್ತಿಯ ಅಷ್ಟೆ, ಬಂಬರಗಾ ಹಾಗೂ ಹೊನಗಾ ಗ್ರಾಮದಲ್ಲಿ ಹಮ್ಮಿಕೊಳ್ಳಲಾದ ಪ್ರಚಾರ ಸಭೆಗಳಲ್ಲಿ ಭಾಗವಹಿಸಿ ಮಾತನಾಡಿ, ರಾಜ್ಯದಲ್ಲಿ ಪಕ್ಷದ ಪರ ಅಲೆಯಿದ್ದು, ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬರಲಿದೆ. ಆದ್ದರಿಂದ ಈ ಭಾರಿ ಕ್ಷೇತ್ರದ ಮತದಾರರು ಪ್ರಜ್ಞಾವಂತಿಕೆಯನ್ನು ಮೆರೆಯಬೇಕು. ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲು ಒಂದು ಅವಕಾಶ ನನಗೂ ನೀಡಬೇಕು ಎಂದು



ಮತದಾರರಲ್ಲಿ ಮನವಿ ಮಾಡಿದರು.

ಬಡ ಜನರ ಸಮಸ್ಯೆ ಸ್ಪಂದಿಸದ ಬಿಜೆಪಿ: ಬಡ ಜನ, ಕಾರ್ಮಿಕರು ಸೇರಿದಂತೆ ರೈತರ ಸಮಸ್ಯೆಗಳ ಕುರಿತು ಬಿಜೆಪಿ ಯಾವತ್ತು ಚರ್ಚೆ ಮಾಡಿಲ್ಲ. ಅಲ್ಲದೇ ಕೇಂದ್ರ ಸರ್ಕಾರ ಮಿತಿಮೀರಿದ ಭ್ರಷ್ಟಾಚಾರದಿಂದ ಜನ ಬೇಸತ್ತಿದ್ದಾರೆ. ಸುಳ್ಳು ಭರವಸೆ, ಜಾತಿಗಳ ಮಧ್ಯೆ ವಿಷಬೀಜ ಬಿತ್ತುವಿಕೆ, ದಿನಬಳಕೆ ವಸ್ತುಗಳ ಬೆಲೆ ಏರಿಸಿ ಜನರನ್ನು ಸಂಕಷ್ಟಕ್ಕೆ ದೂಡಿದ್ದಾರೆ. ವಿವಿಧ ಧರ್ಮ ಮತ್ತು ಜಾತಿಗಳ ಜನರ ನಡುವೆ ನಿರ್ಣಾಯಕ ನೀತಿ ಅನುಸರಿಸುತ್ತಿರುವ ಬಿಜೆಪಿ ಸರ್ಕಾರದ ಕೆಟ್ಟ ಆಡಳಿತದಿಂದ ರಾಜ್ಯದ ಜನರು ಬೇಸತ್ತು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತಂದಿದ್ದಾರೆ. ಆದ್ದರಿಂದ ಕೈ ಕಾರ್ಯಕರ್ತರು ಬಿಜೆಪಿಯವರ ದುರಾಡಳಿತ ಹಾಗೂ ಕಾಂಗ್ರೆಸ್ ಸಸರ್ಕಾರ ಅವಧಿಯಲ್ಲಿ ಕೈಗೊಂಡಿರುವ ಹಲವಾರು ಜನಪರ ಯೋಜನೆಗಳ ಬಗ್ಗೆ ಮನೆ ಮನೆಗೆ ತೆರಳಿ ಜನರಿಗೆ ತಿಳಿಸುವ ಕೆಲಸವನ್ನು ಕಾರ್ಯಕರ್ತರು ಮಾಡಬೇಕು ಎಂದು ಹೇಳಿದರು.

ಚಿಕ್ಕೋಡಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ನನಗೆ ಮತದಾರರು ಮತ ನೀಡುವಂತೆ ಕೈ ಕಾರ್ಯಕರ್ತರು ಕಾಂಗ್ರೆಸ್ ಜಾ-ರಿಗೆ ತಂದ ಯೋಜನೆಗಳನ್ನು ಮನೆ ಮನೆಗೆ ತಿಳಿಸಿಬೇಕು. ಸಚಿವರಾದ ನಮ್ಮ ತಂದೆಯವರಾದ ಸತೀಶ್ ಜಾರಕಿಹೊಳಿ ಅವರನ್ನು ಹಾಗೂ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಮೂಲಕ ಚಿಕ್ಕೋಡಿ ಲೋಕಸಭೆಯ ಅಭಿವೃದ್ಧಿಗೆ ಒತ್ತು ನೀಡಲಾಗುವುದು ಹಾಗೂ ಸುವರ್ಣ ಚಿಕ್ಕೋಡಿ ಕನಸು ನನಸು ಮಾಡಲಾಗುವುದು ಎಂದು ಹೇಳಿದರು.

ಸಚಿವರ ಆಪ್ತ ಸಹಾಯಕ ಅರವಿಂದ ಕಾರ್ಚಿ ಮಾತನಾಡಿ, ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಅಭಿವೃದ್ಧಿ ವಿಚಾರದಲ್ಲಿ ಕಳೆದ 6 ವರ್ಷಗಳಲ್ಲಿ ಬಿಜೆಪಿ ಸಂಸದ ಅವರು ಸಂಪೂರ್ಣವಾಗಿ ವಿಫಲರಾಗಿದ್ದಾರೆ. ಕೇಂದ್ರ ಸರ್ಕಾರದ ದುರಾಡಳಿತದಿಂದ ನೊಂದ ಜನರಿಗೆ ನಮ್ಮ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ನೆಮ್ಮದಿ ದೊರಕಿದ್ದು, ನಮ್ಮ ಕಾರ್ಯಕರ್ತರು ಮನೆ ಮನೆಗೆ ತೆರಳಿ ಬಿಜೆಪಿ ಸಂಸದರ ವೈಫಲ್ಯಗಳನ್ನು ತಿಳಿಸಲು ಮುಂದಾಗಬೇಕು. ಅಲ್ಲದೇ ಕೈ ಅಭ್ಯರ್ಥಿ ಪ್ರಿಯಂಕಾ ಕಳೆದ ನಾಲ್ಕು ವರ್ಷಗಳಿಂದ ಸಾಮಾಜಿಕ ಕೆಲಸಗಳನ್ನು ಮಾಡುತ್ತಾ, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದಾರೆ. ಈಗ ರಾಜಕೀಯ ಸೇವೆ ಮಾಡಲು ನೀವು ಅನುವು ಮಾಡಿಕೊಡಬೇಕೆಂದು ಹೇಳಿದರು.

ಇದಕ್ಕೂ ಮೊದಲು ವಿವಿಧ ಗ್ರಾಮಗಳಲ್ಲಿ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಗ್ರಾಮದ ಮಹಿಳೆಯರು ಹೂ ಮಾಲೆ ಹಾಕಿ ಸನ್ಮಾನಿಸಿದರು. ನಂತರ ವಿವಿಧ ಗ್ರಾಮಗಳಲ್ಲಿ ಆಗಮಿಸಿದ ಪ್ರಿಯಂಕಾ ಅವರಿಗೆ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಅದ್ದೂರಿಯಾಗಿ ಸ್ವಾಗತ ಕೋರಿದರು. ಈ ಸಂದರ್ಭದಲ್ಲಿ ಗ್ರಾಮದ ಹಿರಿಯ ಮುಖಂಡರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತ-ರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089